ಸಂಪುಟ : 9 ಸಂಚಿಕೆ 266 ಪುಟ : 4 ಬೆಲೆ: 3.00 ಮಂಗಳವಾರ ಡಿಸೆಂಬರ್ 3 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 266 Pages : 4 Price : 3.00 Tuesday December 3 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 3 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 11 – ನಿಸರ್ಗ ಬಡಾವಣೆ, ರಿಂಗ್ ರೋಡ್, ಶಿವ ಬಸವನಗರ, ಹನುಮಂತ ದೇವರ ಗುಡಿ, ಕಾಶಿ ವಿಶ್ವನಾಥ ಗುಡಿ, ಗಾಣಿಗೇರ ಭವನ, ನಾಗಪ್ಪನ ಕಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 – ಶಿಕ್ಷಕರ ಬಡಾವಣೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 30, 34 – ವಡ್ಡರಗೇರಿ, 46 ಪ್ಲಾಟ್, ಕೊರವರ ಓಣಿ, ಮೂರು ಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ಕೊಟಗಿ ಮಾಸ್ತರ್ ಲೈನ್, ಹನುಮಂತ ದೇವರ ಗುಡಿ ಲೈನ್, ಅರವಿಯವರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 20, 23, 25 – ಜಂತ್ಲಿಯವರ ಲೈನ್, ಕುಂಬಾರ ಓಣಿ, ದ್ಯಾಮವ್ವನ ಕಟ್ಟಿ, ಹನುಮಾನ ಗರಡಿ, ವಿಭೂತಿ ಓಣಿ, ದ್ರೌಪತಿ ಬಾಯಿ, ಕೆರೆಕಲಮಟ್ಟಿ, ಸಿ ಟಿ ಹಾಲ್ ಭಾಗ 1, 2. ವಾರ್ಡ್ ನಂ. 4 – ಕಣವಿ ಪ್ಲಾಟ್ ಪೂರ್ತಿ ಭಾಗಗಳು.

ವಾರ್ಡ್ ನಂ. 21, 22 – ವಿಜಯನಗರ ಶಾಲೆ, ಕಮತರ ಪ್ಲಾಟ್, ಶಿಗ್ಗಾವಿ ಲೇಔಟ್, ಕರುಗಲ್ ಲೇಔಟ್, ವಾಲ್ಮೀಕಿ ಭವನ, ಟವರ್ ಕಂಬ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ ವಸೂಲಿ ಅಭಿಯಾನಕ್ಕೆ ಚಾಲನೆ ನೀಡಿದ ತಾ.ಪಂ ಇಓ ಚಂದ್ರಶೇಖರ ಕಂದಕೂರ

# ತೆರಿಗೆ ವಸೂಲಿ ವಿಶೇಷ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಡಿಸೆಂಬರ್ 1ರಿಂದ 30ರವರೆಗೆ 'ತೆರಿಗೆ ವಸೂಲಾತಿ ವಿಶೇಷ ಅಭಿಯಾನ' ಹಮ್ಮಿಕೊಳ್ಳಲಾಗಿದ್ದು, ತಾಲೂಕಿನ ಎಲ್ಲಾ ಗ್ರಾ.ಪಂ ಸಿಬ್ಬಂದಿಗಳು ಕೈಜೋಡಿಸಿ ಅಭಿಯಾನ ಯಶಸ್ವಿಗೊಳಿಸಬೇಕೆಂದು ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಹೇಳಿದರು. ತಾಲೂಕಿನ ಅಮರಗೋಳ ಗ್ರಾ.ಪಂ ವ್ಯಾಪ್ತಿಯ ಬಸರಕೋಡ ಗ್ರಾಮದ ಕರ ವಸೂಲಿ ಅಭಿಯಾನದಲ್ಲಿ ಗ್ರಾ.ಪಂ ಸಿಬ್ಬಂದಿಗಳ ಜೊತೆಗೆ ಮನೆ ಮನೆ ಭೇಟಿ ನೀಡಿ, ಕರ ವಸೂಲಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾ.ಪಂಗಳು ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ಸಶಕ್ತ ಕೇಂದ್ರಗಳಾಗಿ ಕಾರ್ಯ ನಿರ್ವಹಿಸಲು ಆರ್ಥಿಕವಾಗಿ ಸಬಲೀಕರಣ ಹೊಂದುವ ಅವಶ್ಯಕತೆಯಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 200(7) ರಲ್ಲಿ ನಿರ್ದಿಷ್ಟಪಡಿಸಿರುವಂತೆ ಗ್ರಾಮ ಪಂಚಾಯಿತಿಗೆ ಸಲ್ಲಿಕೆ ಆಗಬೇಕಾಗಿರುವ ತೆರಿಗೆಯಲ್ಲಿ ಶೇ.100ರಷ್ಟು ವಸೂಲಿ ಮಾಡುವುದು ಗ್ರಾ.ಪಂನ ಪ್ರಾಥಮಿಕ ಹೊಣೆಗಾರಿಕೆಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಗ್ರಾ.ಪಂಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ಕ್ರೋಢೀಕರಿಸಿಕೊಳ್ಳಲು ಕರವಸೂಲಾತಿ ಅಭಿಯಾನವನ್ನು ವಿಶೇಷ ಅಂದೋಲನವನ್ನಾಗಿ ತಾಲೂಕಿನಲ್ಲಿ ನಡೆಸಬೇಕಿದೆ. ಆದ್ದರಿಂದ ಎಲ್ಲಾ ಗ್ರಾ.ಪಂಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ಗ್ರಾ.ಪಂ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಡಿ.1ರಿಂದ ಡಿ.30ರವರೆಗೆ ಕಡ್ಡಾಯವಾಗಿ ತೆರಿಗೆ ವಸೂಲಾತಿ ಅಭಿಯಾನ ಹಮ್ಮಿಕೊಳ್ಳಬೇಕು ಎಂದರು.



ತಾಲೂಕಿನ ಎಲ್ಲಾ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ಕರ ವಸೂಲಾತಿ ಅಭಿಯಾನವನ್ನು ಗ್ರಾ.ಪಂ ಕಾರ್ಯದರ್ಶಿಗಳು, ನೀರಗಂಟಿಗಳು ಸಿಬ್ಬಂದಿಗಳು ಜೊತೆ ಸೇರಿಕೊಂಡು ಮನೆಗಳು, ಅಂಗಡಿ ಮುಂಗಟ್ಟು, ಮಳಿಗೆಗಳಿಗೆ ತೆರಳಿ ಕರ ವಸೂಲಾತಿ ಕೈಗೊಂಡು ಅಭಿಯಾನ ಯಶಸ್ವಿಗೊಳಿಸಲು ಸಹಕಾರ ನೀಡಿದರೆ ನಿಗದಿತ ಗುರಿಯನ್ನು ಸಾಧಿಸಬಹುದು ಎಂದರು. ಈ ಸಂದರ್ಭದಲ್ಲಿ ಅಮರಗೋಳ ಗ್ರಾ.ಪಂ ಅಧ್ಯಕ್ಷ ಈರಣ್ಣ ಹೊರಕೇರಿ, ಗ್ರಾ.ಪಂ ಸದಸ್ಯರು, ಅಭಿವೃದ್ಧಿ ಅಧಿಕಾರಿ ಶಿವಕುಮಾರ ಡೊಳ್ಳಿನ, ತಾ.ಪಂ ತಾಂತ್ರಿಕ ಸಂಯೋಜಕ ಪ್ರವೀಣ ಸೂಡಿ ಸೇರಿದಂತೆ ಗ್ರಾ.ಪಂ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಹಾಜರಿದ್ದರು.

> ತಾಲೂಕಿನಲ್ಲಿ ಸ್ಥಳಾಂತರಗೊಂಡ ಗ್ರಾಮಗಳ ಗ್ರಾಮಸ್ಥರು, ಕಂದಾಯ ಇಲಾಖೆಯಿಂದ ಹಕ್ಕುಪತ್ರ ಪಡೆದುಕೊಂಡ ಎಲ್ಲಾ ಜನರು ತಮ್ಮ ಹಕ್ಕುಪತ್ರದ ದೃಢೀಕರಿಸಿದ ಪ್ರತಿ ಹಾಗೂ ಇತರೆ ಪೂರಕ ದಾಖಲೆಗಳನ್ನು ಗ್ರಾಮ ಪಂಚಾಯಿತಿಗೆ ಸಲ್ಲಿಸಿ ಇ-ಸ್ವತ್ತಿನಲ್ಲಿ ಸೇರ್ಪಡೆ ಮಾಡಿ ತೆರಿಗೆ ಕಟ್ಟಲು ಈ ಸೂಚಿಸಲಾಗಿದೆ.
>
> **– ಚಂದ್ರಶೇಖರ ಬಿ.ಕಂದಕೂರ.**
> **ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ.**



## ಶ್ರೀ ಜಗದಂಬಾ ದೇವಸ್ಥಾನದಲ್ಲಿ ಕಾರ್ತಿಕೋತ್ಸವ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮರಾಠಾ ವಿದ್ಯಾವರ್ಧಕ ಸಂಘದ ವತಿಯಿಂದ ಶ್ರೀ ಜಗದಂಬಾ ದೇವಸ್ಥಾನದಲ್ಲಿ ಡಿ.3ರ ಸಾಯಂಕಾಲ 7 ಗಂಟೆಗೆ ಕಾರ್ತಿಕೋತ್ಸವ ಜರುಗಲಿದೆ. ನಂತರ ಶ್ರೀ ಜಗದಂಬಾದೇವಿಯ ಪಾಲಕಿ ಉತ್ಸವ, ಮಹಾಪ್ರಸಾದ ನೆರವೇರಲಿದೆ.

ದೇವಿಯ ಸದ್ಭಕ್ತರು, ಸಮಾಜ ಬಾಂಧವರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀದೇವಿಯ ಕೃಪೆಗೆ ಪಾತ್ರರಾಗಲು ಸಂಘದ ಅಧ್ಯಕ್ಷ ವಿನಿತಕುಮಾರ ವ್ಹಿ.ಜಗತಾಪ, ಗೌರವ ಕಾರ್ಯದರ್ಶಿ ಶಿವಾಜಿ ವಾಯ್.ಗ್ವಾರಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# 'ಸಂತ ರಾಜಕಾರಣಿ ಡಿ.ಆರ್. ಪಾಟೀಲ' ಗ್ರಂಥ ಬಿಡುಗಡೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಂತ ರಾಜಕಾರಣಿ ಎಂದೇ ಹೆಸರಾಗಿರುವ ಮಾಜಿ ಶಾಸಕ ಡಿ.ಆರ್. ಪಾಟೀಲರ ಅಭಿನಂದನಾ ಗ್ರಂಥ ಡಿ. 4ರಂದು ಬೆಳಿಗ್ಗೆ 10.30ಕ್ಕೆ ತೋಂಟದಾರ್ಯ ಮಠದ ಆವರಣದ ಸಿದ್ಧಲಿಂಗ ಶ್ರೀಗಳ ಸಭಾಂಗಣದಲ್ಲಿ ಬಿಡುಗಡೆಗೊಳ್ಳಲಿದೆ ಎಂದು ಕಾಂಗ್ರೆಸ್ ಹಿರಿಯ ಮುಖಂಡ ಗುರಣ್ಣ ಬಳಗಾನೂರ ಮಾಹಿತಿ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಐದು ದಶಕದಿಂದ ಸಕ್ರಿಯ ರಾಜಕಾರಣದಲ್ಲಿರುವ ಡಿ.ಆರ್. ಪಾಟೀಲರನ್ನು ಹತ್ತಿರದಿಂದ ಅರಿತಿರುವ ಜೆ.ಕೆ. ಜಮಾದಾರ ಅವರು ಈ ಗ್ರಂಥವನ್ನು ಸಂಪಾದಿಸಿದ್ದಾರೆ ಎಂದರು. ಕಾರ್ಯಕ್ರಮದ ಸಾನ್ನಿಧ್ಯವನ್ನು ತೋಂಟದ ಸಿದ್ಧರಾಮ ಶ್ರೀಗಳು, ನಿರ್ಭಯಾನಂದ ಶ್ರೀಗಳು ವಹಿಸಲಿದ್ದು, ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸುವರು. ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ವಹಿಸಲಿದ್ದು, ಗ್ರಂಥವನ್ನು ನಮ್ಮ ರಾಜ್ಯದ ಗಾಂಧಿ ಸ್ಮಾರಕ ಭವನದ ಅಧ್ಯಕ್ಷ ವೂಡೆ ಪಿ.ಕೃಷ್ಣ ಬೆಂಗಳೂರು ಇವರು ಬಿಡುಗಡೆ ಮಾಡಲಿದ್ದಾರೆ.



ಕಂದಾಯ ಸಚಿವ ಕೃಷ್ಣ ಭೈರೇಗೌಡ, ಹಣಕಾಸು ಆಯೋಗದ ಅಧ್ಯಕ್ಷ ನಾರಾಯಣಸ್ವಾಮಿ, ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ, ಶಾಸಕ ಸಿ.ಸಿ. ಪಾಟೀಲ, ರೋಣ ಶಾಸಕ ಜಿ.ಎಸ್. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿ.ಪ ಸದಸ್ಯ ಸಲೀಂ ಅಹ್ಮದ, ಎಸ್.ವಿ. ಸಂಕನೂರ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಎ.ಎಮ್. ಹಿಂಡಸಗೇರಿ, ಬಿ.ಆರ್.೦ ಯಾವಗಲ್, ಕಳಕಪ್ಪ ಬಂಡಿ, ಮಾಜಿ ಸಂಸದ ಆರ್.ಎಸ್. ಪಾಟೀಲ, ಐ.ಜಿ. ಸನದಿ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ರವಿ ಮೂಲಿಮನಿ, ಸಂಗು ಕೆರಕಲಮಟ್ಟಿ, ಶಿವರಾಜ ಕೋಟಿ ಮುಂತಾದವರು ಇದ್ದರು.

## ಹದಿಹರೆಯದವರಿಗೆ ಭರವಸೆ ಮೂಡಿಸಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸ್ಥಳೀಯ ಅಂಜುಮನ್ ಎ ಇಸ್ಲಾಂ ಸರಕಾರಿ ಉರ್ದು ಪ್ರೌಢಶಾಲೆ ಮತ್ತು ಪಿಯು ಕಾಲೇಜಿನಲ್ಲಿ ಹದಿಹರೆಯದ ಹೆಣ್ಣು ಮಕ್ಕಳಿಗಾಗಿ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಗದಗ ಡಿಜಿಎಂ ಕಾಲೇಜು ಉಪನ್ಯಾಸಕಿ, ವೈದ್ಯೆ ಡಾ. ಮಮತಾ ಕಟಾವ್ಕರ್ ಮಾತನಾಡಿ, ಹೆಣ್ಣು ಮಕ್ಕಳಿಗೆ, ಹದಿಹರೆಯದವರಿಗೆ ಭರವಸೆ ಮತ್ತು ಬೆಂಬಲವನ್ನು ನೀಡುವ ಮೂಲಕ ಪ್ರೌಢಾವಸ್ಥೆಯನ್ನು ನಿಭಾಯಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪೌಢಶಾಲೆ ಮುಖ್ಯೋಪಾಧ್ಯಾಯೆ ರಂಜನಾ ತಳಗೇರಿ ವಹಿಸಿದ್ದರು. ಅಂಜುಮನ್ ಅಧ್ಯಕ್ಷ ತಾಜುದ್ದೀನ ಕಿಂಡ್ರಿ, ಎಸ್‌ಡಿಎಂಸಿ ಅಧ್ಯಕ್ಷ ಎ.ಡಿ. ಮುಜಾವರ, ಸದಸ್ಯರಾದ ಇಸ್ಮಾಯಿಲ್ ಖಾಜಿ, ಮಹಮ್ಮದ್ ರಫೀಕ್ ದಲೀಲ, ಹೈದರ್ ಖವಾಸ್, ದಾವೂದ ಜಮಾಲ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಶಾಲಾ-ಕಾಲೇಜು ಬೋಧಕ ವರ್ಗದವರು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಯೋಗ ಡಿಪ್ಲೋಮಾದಲ್ಲಿ ವಿದ್ಯಾರ್ಥಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರು ಅಗಸ್ಟ್-2024ರಲ್ಲಿ ನಡೆಸಿದ ಪಿ.ಜಿ. ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಕೋರ್ಸ್ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಪರೀಕ್ಷೆಯಲ್ಲಿ ಎಸ್.ವಾಯ್. ಬಿ.ಎಂ.ಎಸ್. ಯೋಗ ಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ರೂಪಾ ಕೆ.ಸಂತಿ (867) ಪ್ರಥಮ, ಮಹಮ್ಮದರಫಿ ಅಂಗಡಿ (849) ದ್ವಿತೀಯ, ದೀಪಾ ಜೋಶಿ (848) ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ಮತ್ತು ಶ್ರಮಿಸಿದ ಸಿಬ್ಬಂದಿ ವೃಂದದವರೆಲ್ಲರಿಗೂ ಬಸವ ಯೋಗ ಮಹಾವಿದ್ಯಾಲಯದ ಮಹಾಪೋಷಕರಾಗಿರುವ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಚೇರಮನ್ ಪ್ರೊ. ಎಸ್.ವಿ. ಸಂಕನೂರ, ಆಡಳಿತಾಧಿಕಾರಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ, ಮ್ಯಾನೇಜರ್ ಎಂ.ಎಸ್. ಅಂಗಡಿ, ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಅಲ್ಯುಮಿನಿ ಅಸೋಸಿಯೇಷನ್ ಅಧ್ಯಕ್ಷ ಡಾ. ಆಯ್.ಬಿ. ಕೊಟ್ಟೂರಶೆಟ್ಟಿ, ಬಸವ ಯೋಗ ಚಿಂತನ ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ, ಸದಸ್ಯ ಡಾ. ಎಂ.ವಿ. ಐಹೊಳ್ಳಿ ಅಭಿನಂದಿಸಿದ್ದಾರೆ.



### ಕರವೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ

# ಏಕೀಕರಣದ ಸತ್ವಯುತ ನೆಲ ನಮ್ಮದು

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಏಕೀಕರಣ ಚಳವಳಿಯಿಂದಹಿಡಿದುಕರ್ನಾಟಕ ನಾಮಕರಣದವರೆಗೂ ನಡೆದ ಚಟುವಟಿಕೆಯಲ್ಲಿ ಗದಗ ಜಿಲ್ಲೆಯ ಕೊಡುಗೆ ಅವಿಸ್ಮರಣೀಯ ಎಂದು ರಾಜ್ಯದ ಕಾನೂನು, ಸಂಸದೀಯ ವ್ಯವಹಾರಗಳು,ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.



ನಗರದ ಗಾಂಧಿ ವೃತ್ತದ ಸಮೀಪ ಕರ್ನಾಟಕ ರಕ್ಷಣಾ ವೇದಿಕೆ(ಟಿ.ಎ.ನಾರಾಯಣಗೌಡ್ರ ಬಣ)ಯ ಗದಗ ಜಿಲ್ಲಾ ಘಟಕ ಹಮ್ಮಿಕೊಂಡಿದ್ದ69ನೇಕರ್ನಾಟಕ ರಾಜ್ಯೋತ್ಸವಕಾರ್ಯಕ್ರಮದನಿಮಿತ್ತ ಶನಿವಾರ ಸಂಜೆ ಹಮ್ಮಿಕೊಂಡಿದ್ದ ಗದಗ ಕನ್ನಡೋತ್ಸವ, ಸಾಂಸ್ಕೃತಿಕ ಸಂಭ್ರಮಮತ್ತುಸಾಧಕರಿಗೆಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕಏಕೀಕರಣಚಳವಳಿಗೆ ನಾಂದಿಹಾಡಿದ'ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು' ಗೀತೆ ಬರೆದ ಹುಯಿಲಗೋಳ ನಾರಾಯಣರಾಯರು,ಚಳವಳಿಯ ಮುಂಚೂಣಿಯಲ್ಲಿದ್ದಅಂದಾನೆಪ್ಪ ದೊಡ್ಡಮೇಟಿಯವರು ಗದಗ ಜಿಲ್ಲೆಯವರು.ಸಂಗೀತದಲ್ಲಿಭಾರತ ರತ್ನಪಡೆದಪಂ.ಭೀಮಸೇನಜೋಶಿ ಅವರು ಗದಗನವರು. ಕರ್ನಾಟಕ ನಾಮಕರಣಕ್ಕೆ ಬೀಜಾಂಕುರ ಮಾಡಿದ್ದು ಗದಗನವರೇ ಆದ ಕೆ.ಎಚ್. ಪಾಟೀಲರು. ಅಷ್ಟೇ ಏಕೆ, ಕನ್ನಡ ಭಾಷೆಗೆ ಸಂಬಂಧಿಸಿದಂತೆ ಗೋಕಾಕಚಳವಳಿಗೆಬಲತುಂಬಿದ ಲಿಂ.ಜ.ಡಾ.ತೋಂಟದಸಿದ್ಧಲಿಮಗ ಶ್ರೀಗಳುಕೂಡಗದಗನೆಲದವರೇ. ಹೀಗಾಗಿ ಗದಗ ಜಿಲ್ಲೆಯವರು ವಿಶೇಷ ಎಂದು ಹೇಳಿದರು.

ಕನ್ನಡಭಾಷಿಕರುಒಂದಾಗಬೇಕು ಎಂದು ಕರ್ನಾಟಕ ಏಕೀಕರಣ ಮಾಡಿದಸತ್ವಯುತನೆಲನಮ್ಮದು. ಮೈಸೂರುರಾಜ್ಯದಿಂದ'ಕರ್ನಾಟಕ ನಾಮಕರಣ'ಸಂಭ್ರಮದಮೂರು ದಿನಗಳಲ್ಲಿಗದಗನಲ್ಲೂಒಂದುದಿನ ನಡೆದಿತ್ತು. ಇದೀಗ ಆ ಸಂಭ್ರಮಕ್ಕೆ 50ವರ್ಷತುಂಬಿದ್ದಕ್ಕೆಕಳೆದವರ್ಷ ಅದೇ ವೈಭವ ಮರುಕಳಿಸಿತ್ತು. ಕನ್ನಡ ನಾಡು, ನುಡಿಗಾಗಿ ಶ್ರೇಷ್ಠ, ದೊಡ್ಡಮೆರವಣಿಗೆಗದಗನೆಲದಲ್ಲಿ ನಡೆದಿದೆ.ಇದುಇತಿಹಾಸಎಂದರು.

ಪ್ರವಾಸೋದ್ಯಮಕ್ಕೆ ಉತ್ತರ ಕರ್ನಾಟಕದಲ್ಲಿ ಇರುವ ಅವಕಾಶ ಬೇರೆಲ್ಲೂಇಲ್ಲ.ಲಕ್ಕುಂಡಿಯಲ್ಲಿನಡೆದ ಪ್ರಾಚ್ಯಾವಶೇಷಗಳಅಭಿಯಾನದ ವೇಳೆ ಮಾಡಿಕೊಂಡ ಮನವಿಗೆ ಅಲ್ಲಿನಜನಉತ್ತಮವಾಗಿಸ್ಪಂದಿಸಿ, 1200 ಪ್ರಾಚ್ಯಾವಶೇಷಗಳನ್ನು ನೀಡಿದ್ದಾರೆ. 300ಕ್ಕೂ ಹೆಚ್ಚು ನಾಣ್ಯಗಳು ಲಭಿಸಿವೆ ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಜ.ಡಾ. ತೋಂಟದಸಿದ್ಧರಾಮಸ್ವಾಮೀಜಿ, ಮನ ತಣಿಸುವ ಅಮೃತ ಕನ್ನಡ ಭಾಷೆಯಲ್ಲಿ ಇದೆ. ಕನ್ನಡ ಭಾಷೆ ಬಗ್ಗೆ ತಾಯಿಯಷ್ಟೇ ಅಭಿಮಾನ ಇರಬೇಕು, ಗೌರವ ಇರಬೇಕು. ತಾಯಿ ನಿರ್ಲಕ್ಷಿಸಿದರೆ ಸೊರಗಿ, ಸಾಯುತ್ತಾಳೆ ಎಂದರು.

ಸರ್ಕಾರದಗ್ಯಾರಂಟಿಯೋಜನೆ ರೋಣ ತಾಲೂಕು ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ ಜಿ. ಪಾಟೀಲ ಮಾತನಾಡಿ, ಕರವೇ ನೇತೃತ್ವದಲ್ಲಿಸಂಘಟಿತರಾಗಿಕನ್ನಡ ಬೆಳವಣಿಗೆಗೆ ಕೈಜೋಡಿಸಬೇಕು ಎಂದರು.

ಕೆಪಿಸಿಸಿಹಿಂದುಳಿದವಿಭಾಗದ ರಾಜ್ಯಉಪಾಧ್ಯಕ್ಷಹಾಗೂನ್ಯಾಯವಾದಿ ಹೆಚ್.ಎಸ್.ಸೋಂಪೂರಅವರು ಮಾತನಾಡಿ,ತಾಯಿ ಭುವನೇಶ್ವರಿ ಮೂಲ ಚಿತ್ರ ಪರಿಕಲ್ಪನೆ, ಅದನ್ನು ರಚಿಸಿದ್ದುಗದಗನವರು.ಮುಂಬೈ ವಿಧಾನಸಭೆಯಲ್ಲಿ ಕನ್ನಡ ಕಂಪು ಹರಡಿದ ಕೀರ್ತಿ ಅಂದಾನೆಪ್ಪ ದೊಡ್ಡಮೇಟಿ ಅವರಿಗೆ ಸಲ್ಲುತ್ತದೆ. ಮೈಸೂರು ರಾಜ್ಯಕ್ಕೆ ಕರ್ನಾಟಕ ನಾಮಕರಣದಲ್ಲಿ ಗದಗ ನೆಲವೇ ಬೀಜ ಬಿತ್ತಿದ್ದು. ಇದಕ್ಕೆ ಕೆ.ಎಚ್. ಪಾಟೀಲರೇ ಕಾರಣ ಎಂದರು.

ಉಸಿರು ಫೌಂಡೇಶನ್ ಅಧ್ಯಕ್ಷ ಶರಣ ಪಾಟೀಲ, ನಿವೃತ್ತ ಮುಖ್ಯೋಪಾಧ್ಯಾಯ ಎಸ್. ಎನ್. ಬಳ್ಳಾರಿ, ಕರವೇ ಗದಗ ಜಿಲ್ಲಾಧ್ಯಕ್ಷಹನಮಂತಪ್ಪಅಬ್ಬಿಗೇರಿ ಮಾತನಾಡಿದರು. ಕರ್ನಾಟಕ ಕಾರ್ಯನಿರತಪತ್ರಕರ್ತರಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ಮುಳಗುಂದ ಪ.ಪಂ ಸದಸ್ಯ ಬಸವರಾಜಹಾರೋಗೇರಿ,ಬಸವರಾಜ ಕಡೇಮನಿ, ಹನಮಂತಪ್ಪ ಮೇಟಿ, ಆಶಾ ಜೂಲಗುಡ್ಡಸೇರಿ ಹಲವರು ವೇದಿಕೆಯಲ್ಲಿದ್ದರು.

ರಾಜ್ಯೋತ್ಸವಪ್ರಶಸ್ತಿಪುರಸ್ಕೃತ ಡಾ.ಜಿ.ಬಿ.ಬಿಡಿನಹಾಳ,ಸುವರ್ಣ ಸಂಭ್ರಮಪ್ರಶಸ್ತಿಪುರಸ್ಕೃತಸುರೇಶ, ಧಾರವಾಡ ವಿವಿಯಿಂದ ಕನ್ನಡ ಎಂ.ಎ. ವಿಭಾಗದಲ್ಲಿ ಚಿನ್ನದ ಪದಕ ಪಡೆದ ಪೂಜಾ, ಸಿ.ಎಸ್. ಪಾಟೀಲ ಶಾಲೆಯ ಶಿಕ್ಷಕ ಶಂಕ್ರಪ್ಪ ಗುಜಮಾಗಡಿಅವರನ್ನುಸನ್ಮಾನಿಸಿ, ಗೌರವಿಸಲಾಯಿತು.

ಕೃಷ್ಣಲಮಾಣಿಸ್ವಾಗತಿಸಿದರು. ನಿಂಗನಗೌಡ ಮಾಲೀಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಹೊಗೆಸೊಪ್ಪಿನ ಸೇರಿ ಹಲವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ರಾಜ್ಯದ ನೆಲ-ಜಲ ವಿಷಯಕ್ಕೆ ಸಂಬಂಧಿಸಿದಂತೆ ಮೊದಲು ಧ್ವನಿ ಎತ್ತುವುದೇ ಕರವೇ. ಆ ಧ್ವನಿ ಎಂದಿಗೂ ಕುಗ್ಗಬಾರದು. ಅದರಲ್ಲೂ ಗದಗನಲ್ಲಿ ಎಚ್.ಎಸ್. ಸೋಂಪೂರಅವರು ಕರವೇ ಹೋರಾಟದಲ್ಲಿ ಛಾಪು ಮೂಡಿಸಿದ್ದಾರೆ. ಪ್ರವಾಸೋದ್ಯಮದಲ್ಲಿ ವಿಶೇಷ ಆಸಕ್ತಿಯಿಂದ ಇಲಾಖೆಗೆ ಒಂದು ವಿಶೇಷ ಮೆರುಗು ನೀಡುತ್ತಿರುವ ಸಚಿವ ಎಚ್.ಕೆ. ಪಾಟೀಲರು, ರಾಜ್ಯದ ಯಲ್ಲಮ್ಮನಗುಡ್ಡಕ್ಕೆ ಹೊಸ ರೂಪ ನೀಡುವ ಮೂಲಕ ರಾಷ್ಟ್ರಮಟ್ಟದಲ್ಲಿ ಗುರುತಿಸುವ ಕೆಲಸ ಮಾಡುತ್ತಿದ್ದಾರೆ ಎಂದರು.

# ನಾಳೆ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಯುವ ಸಂಘಗಳ ಒಕ್ಕೂಟ, ಗದಗ ಲಾಯನ್ಸ್ ಶಿಕ್ಷಣ ಸಂಸ್ಥೆ, ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯ ಗದಗ ಇವರ ಸಹಯೋಗದಲ್ಲಿ 2024-2025ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವವನ್ನು ಡಿಸೆಂಬರ್ 4 ರಂದು ಬೆ 10 ಗಂಟೆಗೆ ನಗರದ ಲಾಯನ್ಸ್ ಶಾಲೆ ಆವರಣ, ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ ಅವರು ಆಗಮಿಸುವರು.ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯದರ್ಶಿಗಳಾದ ರಂದೀಪ್ ಡಿ, ಕರ್ನಾಟಕ ಲೋಕಸೇವಾ ಆಯೋಗದ ಮುಖ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಚೇತನ್ ಆರ್, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ರಾಜ್ಯಾಧ್ಯಕ್ಷರಾದ ಡಾ.ಎಸ್. ಬಾಲಾಜಿ, ಲಾಯನ್ಸ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಆನಂದ ಪೋತ್ನೀಸ್, ಯುವ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ರವಿಕಾಂತ ಅಂಗಡಿ ಆಗಮಿಸುವರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ, ನೆಹರು ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿ ಶ್ರೀಮತಿ ರಂಜನಿ ಆರ್, ಸ್ಟುಡೆಂಟ್ ಎಜ್ಯುಕೇಷನ್ ಸೊಸೈಟಿ ಚೇರಮನ್ ರಾದ ಪ್ರೊ ರಾಜೇಶ್ ಕುಲಕರ್ಣಿ, ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯರಾದ ಪ್ರೊ ಪ್ರೇಮಾನಂದ ರೋಣ ಸ್ವಾಗತ ಕೋರಿದ್ದಾರೆ.

**ಕಾರ್ಯಕ್ರಮದ ವಿವರ**

ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು 15 ರಿಂದ 29 ವರ್ಷ ವಯೋಮಾನದೊಳಗಿನ ಯುವಜನರು ವಯಸ್ಸಿನ ದಾಖಲೆಗಳನ್ನು ಸಲ್ಲಿಸಿ ಮುಕ್ತವಾಗಿ ಭಾಗವಹಿಸಲು ಅವಕಾಶವಿದೆ.

**ವಿಷಯಾಧಾರಿತ ಸ್ಪರ್ಧೆಗಳು**

**ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ನಾವೀನ್ಯತೆ ( ವರ್ಕಿಂಗ್ ಮಾಡೆಲ್ ) ವಿಜ್ಞಾನ ಮೇಳ:** ವೈಯಕ್ತಿಕ ( 1 ಸ್ಪರ್ಧೆ) ಮತ್ತು ಗುಂಪು ( 5 ಸ್ಪರ್ಧೆಗಳು).

ಸಾಂಸ್ಕೃತಿಕ ಸ್ಪರ್ಧೆಗಳು: ಕನ್ನಡ, ಆಂಗ್ಲ , ಹಿಂದಿ ಭಾಷೆಯಲ್ಲಿ

ಜನಪದ ನೃತ್ಯ : ವೈಯಕ್ತಿಕ (1 + 4 = 5 ಜನರು ), ಗುಂಪು ( 10 ಜನರು)

ಜನಪದ ಗೀತೆ : ವೈಯಕ್ತಿಕ ( 1 + 4 = 5 ಜನರು), ಗುಂಪು ( 10 ಜನರು)

ಜೀವನ ಕೌಶಲ್ಯ ಸ್ಪರ್ಧೆಗಳು: ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ ( ವೈಯಕ್ತಿಕ ಸ್ಪರ್ಧೆಗಳು).ಕವಿತೆ ಬರೆಯುವುದು ( 1000 ಪದಗಳಿಗೆ ಮೀರದಂತೆ ). ಕಥೆ ಬರೆಯುವುದು ( 1000 ಪದಗಳಿಗೆ ಮೀರದಂತೆ). ಭಾಷಣ ( ಘೋಷಣೆ) ಸ್ಪರ್ಧೆ ( ಮೂರು ನಿಮಿಷಗಳು ಮಾತ್ರ). ಚಿತ್ರ ಕಲೆ ಸ್ಪರ್ಧೆ 03 ,ಎಜ ಎಜ ( 11.7" ಫ 16.5" )

ಮೊಬೈಲ್ ಫೋಟೋಗ್ರಾಫಿ ಸ್ಪರ್ಧೆ

ಯುವಕೃತಿ ವಿಭಾಗ ( ಒಂದು ತಂಡದಲ್ಲಿ 7 ಜನರು)

* ಗುಡಿ ಕೈಗಾರಿಕೆ ಕಲಾ ಪ್ರಕಾರ * ನೇಕಾರಿಕೆ / ಜವಳಿ / * ಕೃಷಿ ಉತ್ಪನ್ನಗಳು ಈ ವಿಭಾಗದಲ್ಲಿ ಆಯ್ಕೆ ಮಾತ್ರ ಮಾಡಲಾಗುವುದು.



ಬೆಟಗೇರಿಯ ಟರ್ನಲ್ ಪೇಟೆಯ ಶ್ರೀ ಮಂಜುನಾಥ ಸ್ವಾಮಿಯ 41ನೇ ವರ್ಷದ ಕಾರ್ತಿಕ ದೀಪೋತ್ಸವ ಧಾರ್ಮಿಕ ಸಮಾರಂಭದಲ್ಲಿ ಪತ್ರಕರ್ತ ಸುನೀಲ್‌ಸಿಂಗ್ ಲದ್ದಿಗೇರಿ ಅವರನ್ನು ದೇವಸ್ಥಾನ ಟ್ರಸ್ಟ್ ಕಮಿಟಿ ವತಿಯಿಂದ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಶಿವಪ್ಪ ಮುಳಗುಂದ, ಬಿಜೆಪಿ ಜಿಲ್ಲಾಧ್ಯಕ್ಷ ರಾಜಣ್ಣ ಕುರಡಗಿ, ನಗರಸಭಾ ಸದಸ್ಯರಾದ ವಿನಾಯಕ ಮಾನ್ವಿ, ಕೃಷ್ಣಾ ಪರಾಪೂರ, ಚಂದ್ರು ತಡಸದ, ಚಂದ್ರಶೇಖರ ತರಿಕೇರಿ, ಮಾಜಿ ಸದಸ್ಯರಾದ ಶ್ರೀನಿವಾಸ ಕರಿ, ಮಂಜುನಾಥ ಎಚ್.ಮುಳಗುಂದ, ಗದಗ ಜಿಲ್ಲಾ ಬಿಜೆಪಿ ಎಸ್.ಸಿ ಮೋರ್ಚಾ ಅಧ್ಯಕ್ಷ ಮಂಜುನಾಥ ಮುಳಗುಂದ, ಅಶೋಕ ಮುಳಗುಂದ, ಬೂದಪ್ಪ ಹುಣಶೀಮರದ, ಲಕ್ಷ್ಮಣ ಮುಳಗುಂದ, ಶಂಕರ ಮುಳಗುಂದ ಮುಂತಾದವರಿದ್ದರು.

# 'ಕನ್ನಡ ಕಣ್ಮಣಿ' ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ನವಭಾರತ ಉದಯ ಪ್ರತಿಷ್ಠಾನ ಬೆಂಗಳೂರು ವತಿಯಿಂದ ಗದುಗಿನ ಎಂ.ಜಿ. ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಮಕ್ತುಮಸಾಬ ನಾಯಕ ಅವರಿಗೆ ಬೆಂಗಳೂರಿನ ವಿಜಯನಗರದ ಶಾಸಕರಾದ ಎಮ್. ಕೃಷ್ಣಪ್ಪ 'ಕನ್ನಡ ಕಣ್ಮಣಿ' ಪ್ರಶಸ್ತಿ ಪ್ರದಾನ ಮಾಡಿದರು. ಸುಮಾರು ಮೂರು ವರ್ಷಗಳ ಅವಧಿಯಲ್ಲಿ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸುಮಾರು 28 ಲಕ್ಷ ವಿದ್ಯಾರ್ಥಿವೇತನ, ಸಾಕಷ್ಟು ಶಾಲೆಗಳಿಗೆ ಲೇಖನ ಸಾಮಗ್ರಿಗಳ, ಬ್ಯಾಗ್‌ಗಳ ವಿತರಣೆ, ಕೋವಿಡ್-19 ಸಂದರ್ಭದಲ್ಲಿ 33 ದಿನಗಳ ಅನ್ನದಾಸೋಹ ಕಾರ್ಯಕ್ರಮ ನೆರವೇರಿಸಿದ ಇವರ ಸಮಾಜ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿ ಸಂದಿದೆ.

### ಜಿಲ್ಲಾ ನೇವಾಕ್ ಸಂಘದ ಗೌರವಾಧ್ಯಕ್ಷರಾಗಿ ಸಿದ್ಧಲಿಂಗೇಶ್ವರ ಪಾಟೀಲ ಆಯ್ಕೆ

# ನರೇಗಾ ನೌಕರರ ಕಾರ್ಯಕ್ಕೆ ಮೆಚ್ಚುಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಹಲವು ಕಾರ್ಯಕ್ರಮಗಳ ಮೂಲಕ ಗ್ರಾಮಸ್ಥರಲ್ಲಿ ಮಹತ್ತರ ಬದಲಾವಣೆ ತಂದಿದೆ. ಈ ಯೋಜನೆಯನ್ನು ಗ್ರಾಮೀಣರಿಗೆ ತಲುಪಿಸುತ್ತಿರುವ ಹೊರಗುತ್ತಿಗೆ ನೌಕರರ ಕಾರ್ಯ ಮೆಚ್ಚುಗೆಗೂ ಪಾತ್ರವಾಗಿದೆ ಎಂದು ಜಿ.ಪಂ ಮಾಜಿ ಅಧ್ಯಕ್ಷರಾದ ಮತ್ತು ಜಿಲ್ಲಾ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಗೌರವಾಧ್ಯಕ್ಷರಾಗಿ ಆಯ್ಕೆಯಾದ ಸಿದ್ಧಲಿಂಗೇಶ್ವರ ಪಾಟೀಲ ಹೇಳಿದರು.

ಭಾನುವಾರ ನಗರದ ಪ್ರವಾಸಿ ಮಂದಿರದಲ್ಲಿ ಗದಗ ಜಿಲ್ಲಾ ನರೇಗಾ ನೌಕರರ ಕ್ಷೇಮಾಭಿವೃದ್ಧಿ (ನೇವಾಕ್) ಸಂಘದ ಪದಾಧಿಕಾರಿ ಸಭೆ ಹಾಗೂ ಗೌರವಾಧಕ್ಷರ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಉದ್ಯೋಗ ಖಾತ್ರಿ ಯೋಜನೆಯಲ್ಲಿ ಹಲವು ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಸಚಿವ ಎಚ್.ಕೆ. ಪಾಟೀಲರು ಆರ್‌ಡಿಪಿಆರ್ ಸಚಿವರಾಗಿದ್ದಾಗ



ಹೊರ ಗುತ್ತಿಗೆಯಡಿ ನಾನಾ ಹಂತದ ಹುದ್ದೆಗಳನ್ನು ಸೃಜಿಸಿ ಯೋಜನೆ ಅನುಷ್ಠಾನದಲ್ಲಿ ಯಾವುದೇ ತೊಂದರೆಯಾಗದಂತೆ ಮಾಡಿದ್ದಾರೆ. ಯೋಜನೆಯಡಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಯೂ ಸಹ ಉತ್ತಮ ಕಾರ್ಯವೈಖರಿಯ ಮೂಲಕ ಗ್ರಾಮೀಣ ಜನರ ಜೀವನ ಮಟ್ಟ ಸುಧಾರಣೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ. ನರೇಗಾ ಹೊರಗುತ್ತಿಗೆ ನೌಕರರ ಸಂಘ ರಚಿಸಿ, ನನ್ನನು ಸಂಘದ ಎಲ್ಲ ಸದಸ್ಯರು ಒಮ್ಮತದಿಂದ ಗೌರವಾಧ್ಯಕ್ಷರಾಗಿ ಆಯ್ಕೆ ಮಾಡಿರುವುದು ಸಂತಸದ ವಿಚಾರವಾಗಿದೆ. ನಮ್ಮ ಕೆಲಸದ ಮೂಲಕ ರಾಜ್ಯದಲ್ಲಿಯೇ ಮಾದರಿ ಜಿಲ್ಲಾ ಸಂಘ ಎಂದು ಗುರುತಿಸುವಂತೆ ಮಾಡೋಣ ಎಂದು ಹೇಳಿದರು.

ಜಿಲ್ಲಾಧ್ಯಕ್ಷ ಸುರೇಶ ಬಾಳಿಕಾಯಿ ಮಾತನಾಡಿ, ಜಿಲ್ಲಾ ನರೇಗಾ ಕ್ಷೇಮಾಭಿವೃದ್ಧಿ ಸಂಘಕ್ಕೆ ಸಾಮಾಜಿಕ ಕಳಕಳಿಯ ಯುವ ಮುಖಂಡರನ್ನು ಗೌರವಾಧ್ಯಕ್ಷರಾಗಿ ಆಯ್ಕೆ ಮಾಡಿರುವ ಎಲ್ಲ ಸದಸ್ಯರಿಗೂ ಅಭಿನಂದನೆಗಳನ್ನು ತಿಳಿಸಿದರಲ್ಲದೆ, ಗೌರವಾಧ್ಯಕ್ಷರ ನೇತೃತ್ವದಲ್ಲಿ ಜಿಲ್ಲಾ ಸಂಘವನ್ನು ಕ್ರಿಯಾಶೀಲವಾಗಿ ಮುನ್ನಡೆಸಿಕೊಂಡು ಹೋಗಲು ಎಲ್ಲ ಸದಸ್ಯರ ಸಹಕಾರ ನೀಡುವಂತೆ ಮನವಿ ಮಾಡಿದರು.

ಜಿಲ್ಲಾ ಉಪಾಧ್ಯಕ್ಷ ಸಿದ್ದು ಗುಡಿಮನಿ, ರಾಜ್ಯ ಸಂಘದ ಜಿಲ್ಲಾ ಪ್ರತಿನಿಧಿ ಕಿರಣಕುಮಾರ ಎಸ್.ಎಚ್., ಜಿಲ್ಲಾ ಸಂಘದ ಸದಸ್ಯರಾದ ವೀರೇಶ ಪಟ್ಟಣಶೆಟ್ಟಿ, ಅರುಣ ತಂಬ್ರಳ್ಳಿ, ತಾಲೂಕು ಪ್ರತಿನಿಧಿಗಳಾದ ನವೀನ ಬಸರಿ, ಮೋಹನ ಹೊಂಬಳ, ಹನುಮಂತ ಡಂಬಳ, ಗುರು ಪಕ್ಕೀರಗೌಡ, ಪ್ರವೀಣ ಗಾಮನಗಟ್ಟಿ, ಮಹೇಶ ಚಿತ್ತವಾಡಗಿ ಇತರರಿದ್ದರು. ಮಾಧ್ಯಮ ಸಂಯೋಜಕ ವೀರೇಶ ಬಸನಗೌಡ್ರ ಕಾರ್ಯಕ್ರಮ ನಿರ್ವಹಿಸಿದರು.

## ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ, ಕುರಿತು ಅರಿವು ಕಾರ್ಯಕ್ರಮ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ ಇವರ ಸಹಯೋಗದಲ್ಲಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ " ಬಾಲ್ಯ ವಿವಾಹ ನಿಷೇಧ ಕಾಯ್ದೆ ಪೋಕ್ಸೊ ಕಾಯ್ದೆ, ಮತ್ತು ಆರ್.ಟಿ.ಇ. ಕಾಯ್ದೆ " ಕುರಿತು ಅರಿವು ಕಾರ್ಯಕ್ರಮವನ್ನು ಡಿಸೆಂಬರ್ 4 ರಂದು ಬೆ 11 ಗಂಟೆಗೆ ಗಜೇಂದ್ರಗಡದ ಎಸ್. ಎಮ್. ಭೂಮರೆಡ್ಡಿ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಗೌರವಾನ್ವಿತ ಸದಸ್ಯರಾದ ಶೇಖರಗೌಡ ರಾಮತ್ನಾಳ ಕಾರ್ಯಕ್ರಮ ಉದ್ಘಾಟಿಸುವರು. ಗಜೇಂದ್ರಗಡದ ಎಸ್.ಎಮ್. ಭೂಮರೆಡ್ಡಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಜಿ.ಬಿ. ಗುಡಿಮನಿ ಅಧ್ಯಕ್ಷತೆ ವಹಿಸುವರು. ಗಜೇಂದ್ರಗಡದ ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ , ಗಜೇಂದ್ರಗಡ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಗಜೇಂದ್ರಗಡ ಪೊಲೀಸ್ ಠಾಣೆ-ಯ ಪಿ.ಎಸ್.ಐ ಸೋಮನಗೌಡ ಗೌಡರ, ರೋಣ ಶಿಶು ಅಭಿವೃದ್ಧಿ ಯೋಜನಾಧಿಕಾರಿ ವಿರುಪಾಕ್ಷಯ್ಯ ಹಿರೇಮಠ ಆಗಮಿಸುವರು.

ಪೊಲೀಸ್ ಇಲಾಖೆ ಎಸ್. ಎಫ್. ಅಸೂಟಿ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಕ್ಲಿನಿಕಲ್ ಸೈಕಾಲಾಜಿಸ್ಟ ಶ್ರೀಧರ್ ಎಮ್.ಸಿ ಅವರು ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀಮತಿ ರಫೀಕಾ ಹಳ್ಳೂರ ಸ್ವಾಗತ ಕೋರಿದ್ದಾರೆ.

### ಪೂಜ್ಯ ಕಲ್ಲಯ್ಯಜ್ಜನವರು, ಬೋಧಲೆ ಮಹಾರಾಜರಿಗೆ ತುಲಾಭಾರ

# ಮಕ್ಕಳಿಗೆ ಉತ್ತಮ ಸಂಸ್ಕಾರ-ಶಿಕ್ಷಣ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಿಗೆ ಉತ್ತಮ ಸಂಸ್ಕಾರ, ಸಂಸ್ಕೃತಿಯೊಂದಿಗೆ ಉತ್ತಮ ಶಿಕ್ಷಣ ನೀಡಿ ಅವರನ್ನು ಆದರ್ಶ ವ್ಯಕ್ತಿಗಳನ್ನಾಗಿ ಮಾಡಲು ಪಾಲಕ, ಪೋಷಕರು ಮುಂದಾಗಬೇಕೆಂದು ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಕಲ್ಲಯ್ಯಜ್ಜನವರು ಹೇಳಿದರು.

ಅವರು ಗದುಗಿನ ವಿಠ್ಠಲ ಮಂದಿರದಲ್ಲಿ ಗದಗ ಭಾವಸಾರ ಕ್ಷತ್ರಿಯ ಸಮಾಜದಿಂದ ಸಂತ ಜ್ಞಾನೇಶ್ವರ ಮಹಾರಾಜರ 728ನೇ ಸಂಜೀವಿನಿ ಸಮಾಧಿ, ಸೋಹಳಾ ಉತ್ಸವದ ಅಂಗವಾಗಿ ಏರ್ಪಡಿಸಿದ್ದ ತುಲಾಭಾರ ಸ್ವೀಕರಿಸಿ ಆಶೀರ್ವಚನ ದಯಪಾಲಿಸಿದರು.

ಮಕ್ಕಳು ಕಲಿಯುವ ವಯಸ್ಸಿನಲ್ಲಿ ಕಲಿಯಬೇಕು. ಟಿ.ವಿ, ಮೊಬೈಲ್‌ನಿಂದ ಕಾಲಹರಣ ಮಾಡದೇ, ದುಶ್ಚಟಗಳಿಂದ ದೂರವಿದ್ದು ಪರಿಶ್ರಮದೊಂದಿಗೆ ಓದಿ ಉನ್ನತ ಸ್ಥಾನಮಾನ ಹೊಂದಬೇಕು. ಸನ್ಮಾರ್ಗದೊಂದಿಗೆ ಧರ್ಮದ ಹಾದಿಯಲ್ಲಿ ಮುನ್ನಡೆಯಬೇಕು



ಎಂದರು.

ತುಲಾಭಾರ ಸ್ವೀಕರಿಸಿ ಆಶೀರ್ವಚನ ದಯಪಾಲಿಸಿದ ಫಂಡರಾಪೂರದ ಪೂಜ್ಯ ಹ.ಭ.ಪ ಪ್ರಭಾಕರ (ದಾದಾ) ಬೋಧಲೆ ಮಹಾರಾಜ ಅವರು ಧರ್ಮ, ಸಂಸ್ಕಾರ, ಸಮಾಜ ಸಂಘಟನೆ ಕುರಿತು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವಿಧಾನ ಪರಿಷತ್ ಸದಸ್ಯ ಡಾ. ಎಂ.ಜಿ. ಮುಳೆ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಸಮಾಜ ಬಾಂಧವರು ಆರ್ಥಿಕವಾಗಿ, ಸಾಮಾಜಿಕವಾಗಿ ಮುನ್ನಡೆ ಸಾಧಿಸಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಸರ್ಕಾರದಿಂದ ಲಭ್ಯವಿರುವ ಸೌಲಭ್ಯಗಳನ್ನು ಪಡೆದುಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಗದಗ ಭಾವಸಾರ ಕ್ಷತ್ರಿಯ ಸಮಾಜ ಉತ್ಸವ ಸಮಿತಿ, ಮಹಿಳಾ ಸಮಿತಿ, ಯುವಕ ಮಂಡಳ ಸೇರಿದಂತೆ ಸಮಾಜಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಸಂಜೆ ದಿಂಡಿಯ ನಗರ ಪ್ರದಕ್ಷಿಣೆ ಜರುಗಿತು.


### ಗುಡಿಸಲು ಪ್ರದೇಶಗಳನ್ನು ಸ್ಲಂ ಕಾಯ್ದೆ ಪ್ರಕಾರ ಘೋಷಣೆಗೆ ಆಗ್ರಹಿಸಿ ಮನವಿ

# ಸ್ಥಳೀಯ ನಿವಾಸಿಗಳಿಗೆ ನಾಗರಿಕ ಸೌಲಭ್ಯ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯಾದ್ಯಂತ ಬಿಬಿಎಂಪಿ ಸೇರಿದಂತೆ, ಮಹಾನಗರ ಪಾಲಿಕೆ, ನಗರ ಸಭೆ ಮತ್ತು ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ 709ಕ್ಕೂ ಹೆಚ್ಚು ಸ್ಲಂಗಳು ಖಾಸಗಿ ಒಡೆತನದಲ್ಲಿದ್ದು, ಇಂತಹ ಪ್ರದೇಶಗಳನ್ನು ಗುರುತಿಸಿ ರಾಜ್ಯ ಸರ್ಕಾರ ತಕ್ಷಣ ಸ್ಲಂ ಕಾಯ್ದೆ 1973ರ ಪ್ರಕಾರ ಘೋಷಣೆ ಮಾಡಿ ಸ್ಥಳೀಯ ನಿವಾಸಿಗಳಿಗೆ ನಾಗರಿಕ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲು ಮುಖ್ಯಮಂತ್ರಿಗಳ ಗಮನಕ್ಕೆ ತರುವಂತೆ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಕಾನೂನು, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ನಗರ ಪ್ರದೇಶದಲ್ಲಿ ಆರೋಗ್ಯಕ್ಕೆ ಹಾನಿಕಾರಕ ಮತ್ತು ಮನುಷ್ಯ ವಾಸ ಯೋಗ್ಯವಲ್ಲದ ಅಥವಾ



ಮೂಲಭೂತ ಸೌಲಭ್ಯಗಳಿಂದ ವಂಚಿತವಾಗುವ ಯಾವುದೇ ಜನವಸತಿ ಪ್ರದೇಶವನ್ನು ಕೊಳಚೆ ಪ್ರದೇಶವೆಂದು ಘೋಷಿಸಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಆದ್ದರಿಂದ ಈ ಸುತ್ತೋಲೆ ಸಂವಿಧಾನ ಬದ್ಧವಾಗಿ ಜಾರಿಯಾಗಿರುವ ಸ್ಲಂ ಕಾಯಿದೆಗೆ ವಿರುದ್ಧವಾಗಿದೆ.

ಸರ್ಕಾರ ಸ್ಲಂ ನಿವಾಸಿಗಳ ಭೂಸ್ವಾಧೀನಕ್ಕೆ ಹಣ ನೀಡುತ್ತಿಲ್ಲ. ಖಾಸಗಿ ಮಾಲೀಕತ್ವದ ಕೊಳಚೆ ಪ್ರದೇಶದ ಘೋಷಣೆಗೆ ತೊಡಕಾಗಿರುವ ಸುತ್ತೋಲೆಯನ್ನು ಈ ಕೂಡಲೇ ಸಾರ್ವಜನಿಕ ಹಿತದೃಷ್ಟಿಯಿಂದ ಹಿಂಪಡೆಯುವಂತೆ ಬರುವ ಚಳಿಗಾಲದ ಅಧಿವೇಶನದಲ್ಲಿ ಚರ್ಚೆ ನಡೆಸಿ ಸ್ಲಂ ಜನರ ವಿರೋಧಿ ಸುತ್ತೋಲೆಯನ್ನು ಕೈಬಿಡಬೇಕೆಂದು ಮನವಿಯ ಮೂಲಕ ಸಚಿವರಿಗೆ ಒತ್ತಾಯಿಸಿದರು.

ಗದಗ ಜಿಲ್ಲಾ ಸ್ಲಂ ಉಪಾಧ್ಯಕ್ಷ ರವಿಕುಮಾರ ಬೆಳಮಕರ, ಕಾರ್ಯದರ್ಶಿ ಅಶೋಕ ಕುಸಬಿ, ಸ್ಲಂ ಸಮಿತಿ ಮುಖಂಡರಾದ ಮೆಹಬೂಬಸಾಬ ಬಳ್ಳಾರಿ, ಮೌಲಾಸಾಬ ಗಚ್ಚಿ, ಬಾಷಾಸಾಬ ಡಂಬಳ, ದುರ್ಗಪ್ಪ ಮಣ್ಣವಡ್ಡರ, ಇಬ್ರಾಹಿಮ ಮುಲ್ಲಾ, ಮಕ್ತುಮಸಾಬ ಮುಲ್ಲಾನವರ, ಶಂಕ್ರಪ್ಪ ರೋಣ, ಖಾಜಾಸಾಬ ಇಸ್ಮಾಯಿಲನವರ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಅತಿಥಿ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25 ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಅಜಾದ ಮಾದರಿ ಶಾಲೆ, ಶಿರಹಟ್ಟಿ ಇಲ್ಲಿ ಕರ್ತವ್ಯ ನಿರ್ವಹಿಸಲು ಇಂಗ್ಲಿಷ್ ಅತಿಥಿ ಶಿಕ್ಷಕರ ಹುದ್ದೆ ಖಾಲಿ ಇದ್ದು, ಸಂಬಂಧಿಸಿದ ವಿಷಯದಲ್ಲಿ ಬಿ.ಎಡ್ ಪದವಿ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ದಾಖಲಾತಿಗಳನ್ನು ಮೌಲಾನಾ ಅಜಾದ್ ಮಾದರಿ ಶಾಲೆಯಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮುಖ್ಯೋಪಾಧ್ಯಾಯರು, ಮೌಲಾನಾ ಅಜಾದ ಮಾದರಿ ಶಾಲೆ, ಶಿರಹಟ್ಟಿ ( ಮೊ. 9844288513 ) ಇವರನ್ನು ಸಂಪರ್ಕಿಸಬಹುದಾಗಿದೆ .

### ಸನ್ಮಾರ್ಗ ಪದವಿ ಪೂರ್ವ ಕಾಲೇಜಿನಲ್ಲಿ ಸೃಜನಾತ್ಮಕ ಪ್ರತಿಭೆಯನ್ನು ಹೊರಸೂಸುವ ಸ್ಪರ್ಧೆಗಳು

# ಜಿಲ್ಲಾ ಮಟ್ಟದ ಯುವಜನೋತ್ಸವ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ, ನೆಹರು ಯುವ ಕೇಂದ್ರ, ಗದಗ ಯುವ ಸಂಘಗಳ ಒಕ್ಕೂಟ, ಗದಗ, ಲಾಯನ್ಸ್ ಶಿಕ್ಷಣ ಸಂಸ್ಥೆ, ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯಗಳ ಸಂಯುಕ್ತ ಆಶ್ರಯದಲ್ಲಿ 2024-25ನೇ ಸಾಲಿನ ಜಿಲ್ಲಾ ಮಟ್ಟದ ಯುವ ಜನೋತ್ಸವವನ್ನು ಡಿ.4ರಂದು ಬೆಳಿಗ್ಗೆ 10 ಗಂಟೆಗೆ ಗದುಗಿನ ಮುಂಡರಗಿ ರಸ್ತೆಯಲ್ಲಿರುವ ಲಾಯನ್ಸ್ ಶಾಲೆ ಆವರಣದಲ್ಲಿ ಜರುಗಲಿದೆ.

ಮುಖ್ಯ ಅತಿಥಿಗಳಾಗಿ ಮಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತರು ಹಾಗೂ ವಿ.ಪ ಸದಸ್ಯ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಜಿ.ಎಸ್. ಪಾಟೀಲ, ಸಂಸದರಾದ ಪಿ.ಸಿ. ಗದ್ದಿಗೌಡರ, ಎಸ್.ವ್ಹಿ. ಸಂಕನೂರ, ಶಾಸಕರಾದ ಪ್ರದೀಪ ಶೆಟ್ಟರ, ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯದರ್ಶಿ ರಂದೀಪ್ ಡಿ, ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಆಯುಕ್ತ ಚೇತನ್ ಆರ್, ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ವಿಶೇಷ ಆಹ್ವಾನಿತರಾಗಿ ಡಾ. ಎಸ್.ಬಾಲಾಜಿ, ಆನಂದ ಪೋತ್ನಿಸ್, ರವಿಕಾಂತ ಅಂಗಡಿ ಉಪಸ್ಥಿತರಿರುವರು.

ಯುವಜನೋತ್ಸವದಲ್ಲಿ ಸಾಂಸ್ಕೃತಿಕ, ಜೀವನ ಕೌಶಲ್ಯ, ಯುವಕೃತಿ ಮುಂತಾದ ಮನರಂಜನಾತ್ಮಕ, ಸೃಜನಾತ್ಮಕ ಪ್ರತಿಭೆಯನ್ನು ಹೊರಸೂಸುವ ಸ್ಪರ್ಧೆಗಳು ಜರುಗಲಿವೆ. ಆಸಕ್ತರು ಆಗಮಿಸುವಂತೆ ಸ್ಟೂಡೆಂಟ್ಸ್ ಎಜುಕೇಶನ್ ಸೊಸೈಟಿಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತ ಮಂಡಳಿಯ ಪದಾಧಿಕಾರಿಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ ಹಾಗೂ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿಗಳು ವಿನಂತಿಸಿದ್ದಾರೆ.

ಉತ್ಸವದ ಘನ ಉಪಸ್ಥಿತಿಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ವಹಿಸುವರು. ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರ ಖಾತೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಸಭೆಯ ಅಧ್ಯಕ್ಷತೆ ವಹಿಸಿ ಉತ್ಸವವನ್ನು ಉದ್ಘಾಟಿಸಲಿದ್ದಾರೆ.

## ಡಾಯಿ ಅಖರ್ ಪತ್ರ ಬರವಣಿಗೆ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಂಚೆ ವೃತ್ತವು ಕರ್ನಾಟಕ ರಾಜ್ಯದಲ್ಲಿ ನೆಲೆಸಿರುವ ನಾಗರಿಕರಿಂದ 2024–2025 ರ ಆರ್ಥಿಕ ವರ್ಷದ ರಾಷ್ಟ್ರೀಯ ಮಟ್ಟದ ಡಾಯಿ ಆಖರ್ ಪತ್ರ ಬರವಣಿಗೆ ಅಭಿಯಾನದಲ್ಲಿ ಭಾಗವಹಿಸಲು ಆಹ್ವಾನಿಸಿದೆ. ಕರ್ನಾಟಕದ ಎಲ್ಲಾ ಶಾಲೆಗಳು ತಮ್ಮ ವಿದ್ಯಾರ್ಥಿಗಳನ್ನು ಅಭಿಯಾನದಲ್ಲಿ ಭಾಗವಹಿಸಲು ಪ್ರೋತ್ಸಾಹಿಸಲು ವಿನಂತಿಸಲಾಗಿದೆ.

ಅಭಿಯಾನದ ಪ್ರಮುಖ ಲಕ್ಷಣಗಳು

ಡಾಯಿ ಆಖರ್ ಪತ್ರ ಬರೆಯುವ ಅಭಿಯಾನದ ವಿಷಯವು "ಬರವಣಿಗೆಯಲ್ಲಿ ಸಂತೋಷ : ಡಿಜಿಟಲ್ ಯುಗದಲ್ಲಿ ಅಕ್ಷರಗಳ ಪ್ರಾಮುಖ್ಯತೆ " ಅಡಿಯಲ್ಲಿ ಪತ್ರವನ್ನು ಇಂಗ್ಲಿಷ್/ಹಿಂದಿ/ಕನ್ನಡದಲ್ಲಿ ಮಾತ್ರ ಬರೆಯಬೇಕು.

ಪತ್ರ ಬರೆಯುವ ಅಭಿಯಾನದ ವಿಭಾಗಗಳು ಕೆಳಕಂಡಂತಿವೆ

18 ವರ್ಷಗಳವರೆಗೆ ಹಾಗೂ 18 ವರ್ಷಕ್ಕಿಂತ ಮೇಲ್ಪಟ್ಟವರು.

ಅಂತರದೇಶಿ ಪತ್ರ ವರ್ಗ (500 ಪದಗಳು)

ಅಂಚೆ ಲಕೋಟೆ ವರ್ಗ (1000 ಪದಗಳು)

ಪ್ರತಿ ವಿಭಾಗದಲ್ಲಿ ವೃತ್ತ ಮಟ್ಟದ ಹಾಗೂ ರಾಷ್ಟ್ರ ಮಟ್ಟದ ಪತ್ರಗಳ ವಿಜೇತರಿಗೆ ಬಹುಮಾನ ನೀಡಲಾಗುವುದು.

ಅಂತರದೇಶಿ ಪತ್ರಗಳು/ ಲಕೋಟೆಗಳನ್ನು ಸಂಬಂಧಪಟ್ಟ ವಿಭಾಗದ ಅಂಚೆ ಕಚೇರಿಗಳ ಹಿರಿಯ ಅಂಚೆ ಅಧೀಕ್ಷಕರು ಅಂಚೆ ಅಧೀಕ್ಷಕರು ಅವರಿಗೆ ತಿಳಿಸಬೇಕು. https://karnatakapost.gov.in ನಲ್ಲಿ ಸಂಬಂಧಪಟ್ಟ ವಿಭಾಗದ ಅಂಚೆ ಕಚೇರಿಗಳ ಹಿರಿಯ ಅಂಚೆ ಅಧೀಕ್ಷಕರು ,ಅಂಚೆ ಅಧೀಕ್ಷಕರು ಪಟ್ಟಿ ಲಭ್ಯವಿದೆ. ಅಂತರದೇಶಿ ಪತ್ರಗಳು / ಲಕೋಟೆಯ ಸಲ್ಲಿಕೆಗೆ ಕೊನೆಯ ದಿನಾಂಕ ಡಿಸೆಂಬರ್ 14 ಆಗಿದ್ದು, ಕರ್ನಾಟಕದ ಎಲ್ಲಾ ಶಾಲೆಗಳು/ಕಾಲೇಜುಗಳು ತಮ್ಮ ವಿದ್ಯಾರ್ಥಿಗಳನ್ನು ಅಭಿಯಾನದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ವಿವರಗಳಿಗಾಗಿ ದಯವಿಟ್ಟು https://karnatakapost.gov.in ಗೆ ಭೇಟಿ ನೀಡಬಹುದಾಗಿದೆ.

### ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಸಾಂಘಿಕ ಚಟುವಟಿಕೆಗಳ ಉದ್ಘಾಟನಾ ಸಮಾರಂಭ

## ಪ್ರಬುದ್ಧವಾಗಿ ಪ್ರಕರಣಗಳನ್ನು ಮಂಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸುತ್ತ ದಿನಮಾನಗಳಲ್ಲಿ ಹೊಸ ಹೊಸ ಕಾನೂನುಗಳು ಜಾರಿಯಾಗಿದ್ದು, ಅವುಗಳನ್ನು ಆಳವಾಗಿ ಅಭ್ಯಾಸ ಮಾಡುವುದರ ಮೂಲಕ ನ್ಯಾಯಾಲಯದಲ್ಲಿ ಪ್ರಬುದ್ಧವಾಗಿ ಪ್ರಕರಣಗಳನ್ನು ಮಂಡಿಸಿ, ಉತ್ತಮ ವಕೀಲರಾಗುವುದು ಇಂದಿನ ಯುವ ವಕೀಲರ ಆದ್ಯತೆಯಾಗಬೇಕಿದೆ ಎಂದು ವಕೀಲ ಹಾಗೂ ಕೆಎಸ್‌ಎಲ್‌ಯು ಸಿಂಡಿಕೇಟ್ ಸದಸ್ಯ ಮೋಹನ ಭಜಂತ್ರಿ ಹೇಳಿದರು.

ನಗರದ ಕೆ.ಎಲ್.ಇ ಸಂಸ್ಥೆಯ ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಸೋಮವಾರ ಜರುಗಿದ ಸಾಂಘಿಕ ಚಟುವಟಿಕೆಗಳ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವ ವಕೀಲರು ನಿರಂತರ ಅಧ್ಯಯನದ ಕೊರತೆಯಿಂದ ನ್ಯಾಯಾಲಯದಲ್ಲಿ ಮುಜುಗರಕ್ಕೆ ಒಳಗಾಗುತ್ತಿದ್ದಾರೆ. ಆದ್ದರಿಂದ ಕಾನೂನು ಕಾಲೇಜುಗಳಲ್ಲಿ ನಡೆಯುವ ಪ್ರತಿಯೊಂದು ಚಟುವಟಿಕೆಗಳಲ್ಲಿಯೂ ಹೆಚ್ಚು ಆಸಕ್ತಿ ವಹಿಸಿ, ಮಾನಸಿಕವಾಗಿ ಸದೃಢರಾಗಲು ಮುಂದಾಗಬೇಕು. ಕಾನೂನು ಒಂದು ವಿಜ್ಞಾನವಾಗಿದ್ದು, ಅದನ್ನು ನಿರಂತರವಾಗಿ ಶೋಧನೆ ಮಾಡುವ ಕಾರ್ಯಕ್ಕೆ ಮುಂದಾಗಬೇಕಾದರೆ ವಿದ್ಯಾರ್ಥಿಗಳು ಗ್ರಂಥಾಲಯ



ಹಾಗೂ ತಂತ್ರಜ್ಞಾನ ಬಳಕೆ ಮಾಡಿಕೊಂಡು ಹೊಸ ತೀರ್ಪುಗಳನ್ನು ನೋಡಲೇಬೇಕು. ಅಂದಾಗ ಮಾತ್ರ ಒಂದು ಪ್ರಕರಣಕ್ಕೆ ಯಾವ ರೀತಿಯಲ್ಲಿ ತಯಾರಿ ನಡೆಸಬೇಕು ಎಂಬುವುದನ್ನು ಅರಿತುಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಗದಗದಲ್ಲಿರುವ ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಅಧ್ಯಯನ ಮಾಡಿದ ಎಷ್ಟೋ ವಕೀಲರು ಇಂದು ಸಿವಿಲ್ ಪ್ರಕರಣಗಳಲ್ಲಿ ಕಿಂಗ್ ಎಂದು ಎನ್ನಿಸಿಕೊಂಡಿದ್ದಾರೆ. ಅಲ್ಲದೆ, ಗ್ರಾಹಕರ ಸಂರಕ್ಷಣಾ ಕಾಯ್ದೆಯಲ್ಲಿ ನೊಂದ ಗ್ರಾಹಕರಿಗೆ ಪರಿಹಾರ ಒದಗಿಸುವುದರ ಮೂಲಕ ಕಾಲೇಜಿನ ಮತ್ತು ಸಂಸ್ಥೆಯ ಹೆಸರನ್ನು ಬೆಳಗುತ್ತಿದ್ದಾರೆ. ಅದರಂತೆ ತಾವು ಕೂಡ ಕ್ರಿಮಿನಲ್, ಸಿವಿಲ್, ಮಾಹಿತಿ ಹಕ್ಕು ಅಡಿಗಳಲ್ಲಿ ಹೆಚ್ಚಿನ ಆಸಕ್ತಿ ವಹಿಸುವುದರ ಮೂಲಕ ಉತ್ತಮ ಸಮಾಜಕ್ಕೆ ಕೊಡುಗೆಯನ್ನು ನೀಡಲು ಮುಂದಾಗಬೇಕು ಎಂದರು.

ಇತ್ತೀಚಿಗೆ ಪಿಎಚ್‌ಡಿ ಪಡೆದ ಉಪನ್ಯಾಸಕ ಡಾ. ಶ್ರೀನಿವಾಸ ಪಾಲ್ಕೊಂಡ ಅವರನ್ನು ಕಾಲೇಜಿನ ವತಿಯಿಂದ ಸನ್ಮಾನಿಸಲಾಯಿತು. ವಿದ್ಯಾರ್ಥಿ ಪರಿಷತ್ ಪ್ರತಿನಿಧಿಗಳಿಗೆ ಪ್ರಮಾಣವಚನ ಬೋಧಿಸಲಾಯಿತು. ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಕಾಲೇಜಿನ ಸ್ಥಾನಿಕ ಮಂಡಳಿ ಚೇರಮನ್ ಎಸ್.ಎ. ಮಾನ್ವಿ, ಸದಸ್ಯ ಎಸ್. ಎಫ್. ಹಾದಿಮನಿ, ಉಪನ್ಯಾಸಕರಾದ ಡಾ. ಜ್ಯೋತಿ ಸಿ.ವಿ, ಶರತ್ ದರಬಾರೆ, ಬಿ.ಎ. ಹಿರೇಮಠ, ಡಾ. ಸಿ.ವಿ. ರಣಗಟ್ಟಿಮಠ ಸೇರಿದಂತೆ ಇತರರಿದ್ದರು. ಉಪನ್ಯಾಸಕ ಡಾ. ವಿಜಯ ಮುರದಂಡೆ ಸ್ವಾಗತಿಸಿದರು. ವಿದ್ಯಾರ್ಥಿನಿ ಚೈತ್ರಾ ಗೌಡ್ರ ಪ್ರಾರ್ಥಿಸಿದರು. ಸುಶ್ಮಾ ಗೊಬ್ಬರಗುಂಪಿ ನಿರೂಪಿಸಿದರು. ಸಂತೋಷ ಭದ್ರಾಪೂರ ವಂದಿಸಿದರು.

ಪ್ರಾಚಾರ್ಯ ಜೈಹನುಮಾನ ಎಚ್.ಕೆ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಓದುವ ಹವ್ಯಾಸ ಬಹಳ ಅಗತ್ಯವಾಗಿದೆ. ವಿದ್ಯಾರ್ಥಿಗಳು ಕೇವಲ ಅಂಕಪಟ್ಟಿಗಳಲ್ಲಿ ಅಂಕಗಳನ್ನು ಗಳಿಸುವ ದೃಷ್ಟಿಯಿಂದ ಕಾನೂನು ಅಭ್ಯಾಸ ಮಾಡದೇ, ಕಾನೂನನ್ನು ಚೆನ್ನಾಗಿ ಅರ್ಥ ಮಾಡಿಕೊಂಡು ಅನ್ಯಾಯಕ್ಕೆ ಒಳಗಾದ ವ್ಯಕ್ತಿಗಳಿಗೆ ನ್ಯಾಯವನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

### ಶ್ರೀ ಗಡ್ಡಯ್ಯಸ್ವಾಮಿ ಮಠದ ಕಾರ್ತಿಕ ದೀಪೋತ್ಸವ ಕಾರ್ಯಕ್ರಮದಲ್ಲಿ ಡಾ. ಸುಜ್ಞಾನದೇವ ಶಿವಾಚಾರ್ಯರು

## ಮನುಷ್ಯನ ಭಾವನೆಗಳು ಪರಿಶುದ್ಧವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪವಿತ್ರವಾದ ಕಾರ್ತಿಕ ಮಾಸದಲ್ಲಿ ಶ್ರದ್ಧಾ-ಭಕ್ತಿಯಿಂದ ಬೆಳಗಿಸುವ ದೀಪ ಮನುಷ್ಯದ ಅಜ್ಞಾನದ ಕತ್ತಲೆ, ಪಾಪ ಕಳೆದು ಸುಜ್ಞಾನದ ಬೆಳಕು ಮೂಡಿಸುತ್ತದೆ ಎಂದು ಬನ್ನಿಕೊಪ್ಪ/ಮೈಸೂರಿನ ಜಪದಕಟ್ಟಿಮಠದ ಡಾ. ಸುಜ್ಞಾನದೇವ ಶಿವಾಚಾರ್ಯರು ಹೇಳಿದರು.

ಅವರು ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಗಡ್ಡಯ್ಯಸ್ವಾಮಿ ಮಠದಲ್ಲಿ ನಡೆದ ಕಾರ್ತಿಕ ದೀಪೋತ್ಸವ ಮತ್ತು ಧಾರ್ಮಿಕ ಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಯಾವುದೇ ಜಾತಿ, ಧರ್ಮ, ಮೇಲು-ಕೀಳೆಂಬ ಭೇದವಿಲ್ಲದ ದೀಪದ ಬೆಳಕಿನಂತೆ ಮನುಷ್ಯನ ಭಾವನೆಗಳು ಪರಿಶುದ್ಧವಾಗಿರಲಿ. ದೀಪ ಎಲ್ಲರನ್ನೂ ಒಗ್ಗೂಡಿಸುವ, ಬಾಂಧವ್ಯ ಬೆಸೆಯುವ ಚೈತನ್ಯಶಕ್ತಿ



ಹೊಂದಿದೆ. ಬದುಕಿನಲ್ಲಿ ಪರಿವರ್ತನಾಶೀಲತೆಯನ್ನು ತರುವ ಕಾರ್ತಿಕ ಮಾಸದ ದೀಪದಿಂದ ಮನುಷ್ಯನಲ್ಲಿನ ಅರಿಷಡ್ವರ್ಗಗಳನ್ನು ಕಳೆದು ಸಂಸ್ಕಾರ ಮೂಡಿಸಿ ಸನ್ಮಾರ್ಗ ಲಭಿಸುತ್ತದೆ. ದೇಗುಲ-ಮಠಗಳು ಮನುಷ್ಯರ ಬದುಕಿಗೆ ಆಚಾರ-ವಿಚಾರ ಸಂಸ್ಕಾರ, ಸನ್ಮಾರ್ಗದ ದಾರಿ ತೋರುತ್ತವೆ. ಹಿರಿಯರು ತೋರಿದ ಸತ್ಪರಂಪರೆ, ಆಚರಣೆಗಳನ್ನು ಪಾಲಿಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ. ನೂರಾರು ವರ್ಷಗಳ ಧಾರ್ಮಿಕ ಇತಿಹಾಸ ಹೊಂದಿರುವ ಶ್ರೀಮಠವು ಈ ಭಾಗದ ಜನರ ಶ್ರದ್ಧಾ-ಭಕ್ತಿ ಕೇಂದ್ರವಾಗಿದೆ ಎಂದರು.

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಪ್ರಾಸ್ತಾವಿಕ ನುಡಿದರು. ಶ್ರೀಮಠದ ವಂಶಸ್ಥರು-ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ ಅಧ್ಯಕ್ಷತೆ ವಹಿಸಿದ್ದರು. ಕೊತಬಾಳದ ರಾಚಯ್ಯ ಹಿರೇಮಠ ಹಾಗೂ ಹರ್ಲಾಪುರ ಸಾಂಬಯ್ಯ ಹಿರೇಮಠ ಅವರ ಕಲಾ ತಂಡದಿಂದ ನಾಡಿನ ಸಂಸ್ಕೃತಿ ಬಿಂಬಿಸುವ ಜಾನಪದ ಕಾರ್ಯಕ್ರಮ ನಡೆಯಿತು.

ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ(ಹೆಸ್ಕಾಂ)ನಿಯಮಿತ ಅಧ್ಯಕ್ಷ ಅಜ್ಜಂಪೀರ ಖಾದ್ರಿ, ಶಾಸಕರಾದ ಜಿ.ಎಸ್. ಪಾಟೀಲ್, ನಾಶೀರಖಾನ ಪಠಾಣ, ಶ್ರೀನಿವಾಸ ಮಾನೆ, ಮಾಜಿ ಶಾಸಕ ರಾಮಣ್ಣ ಲಮಾಣಿ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಲಿಂಬಯ್ಯಸ್ವಾಮಿ ಪ್ರತಿಷ್ಠಾನದ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ, ಎಸ್.ಪಿ. ಬಳಿಗಾರ, ವಿರೂಪಾಕ್ಷಪ್ಪ ಪಡಗೇರಿ, ಗುರುನಾಥ ದಾನಪ್ಪನವರ, ಗೀತಾ ಭೀರಣ್ಣವರ, ಈರಪ್ಪ ಲಮಾಣಿ, ಲಕ್ಷ್ಮಣಗೌಡ ಪಾಟೀಲ, ಈರಣ್ಣ ಅಂಗಡಿ, ಅಜ್ಜು ಗಡ್ಡದೇವರಮಠ, ಮಹೇಶ ಲಿಂಬಯ್ಯಸ್ವಾಮಿಮಠ ಸೇರಿ ಮಠದ ಭಕ್ತರು ಪಾಲ್ಗೊಂಡಿದ್ದರು.

ಆನಂದ ಗಡ್ಡದೇವರಮಠ, ಸೋಮಶೇಖರ ಕೆರಿಮನಿ, ಈಶ್ವರ ಮೆಡ್ಲೇರಿ, ಶಿವಯೋಗಿ ಗಡ್ಡದೇವರಮಠ ನಿರೂಪಿಸಿದರು.

## ಡಾ. ಬಳ್ಳಾರಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಜಪಾನ್ ದೇಶದ ಟೋಕಿಯೊದಲ್ಲಿ ವಿಶ್ವವಾಣಿ ದಿನಪತ್ರಿಕೆ ವತಿಯಿಂದ ವಿವಿಧ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಸಾಧಕರಿಗೆ ಕೊಡಮಾಡಿದ 'ವಿಶ್ವವಾಣಿ' ಗ್ಲೋಬಲ್ ಅಚಿವರ್ಸ್ ಅವಾರ್ಡ್-2024 ಪ್ರಶಸ್ತಿ ಸ್ವೀಕರಿಸಿದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿಗಳಾದ ಡಾ. ಬಸವರಾಜ ಬಳ್ಳಾರಿ ಅವರು ಇತ್ತೀಚೆಗೆ ನಡೆದ ಸರಕಾರಿ ನೌಕರರ ಸಂಘದ ಚುನಾವಣೆಯಲ್ಲಿ ಜಿಲ್ಲಾ ಸಂಘಕ್ಕೆ ನಿರ್ದೇಶಕರಾಗಿ ಆಯ್ಕೆಯಾದ ನಿಮಿತ್ತ ಅವರನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಗದಗ ತಾಲೂಕು ಹೊರಗುತ್ತಿಗೆ ನೌಕರರ ಸಂಘದ ವತಿಯಿಂದ ಸನ್ಮಾಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಹನುಮಂತ ನಾಗರಹಳ್ಳಿ, ಮಹಾಂತೇಶ ಅಂಗಡಿ, ಬಸವರಾಜ ಲಾಳಿ, ಬಸವರಾಜ ಪೂಜಾರ, ಮಂಜುನಾಥ ನಿಡಗುಂದಿ, ಮಹಾಂತೇಶ ಹಾದಿಮನಿ, ರಫೀಕ ಕರ್ನಾಚಿ, ಸುರೇಶ್ ಬಂಡಿವಡ್ಡರ, ಸುದೀಪ್ ಚವ್ಹಾಣ ಹಾಗೂ ಇಲಾಖೆಯ ಸಿಬ್ಬಂದಿಗಳು ಇದ್ದರು.

## ಬೀದಿನಾಯಿ, ಹಂದಿಗಳ ಹಾವಳಿ ನಿಯಂತ್ರಿಸಲು ಮನವಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಮಿತಿಮೀರಿದ ಬೀದಿನಾಯಿ ಮತ್ತು ಹಂದಿಗಳ ಹಾವಳಿಗೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿ ಸೋಮವಾರ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಲಕ್ಷೇಶ್ವರ ತಾಲೂಕು ಘಟಕದ ಕಾರ್ಯಕರ್ತರು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಮನವಿ ಸಲ್ಲಿಸಿದರು.

ಸೇನೆಯ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ ಶರಣು ಗೋಡಿ ಮತ್ತು ತಾಲೂಕು ಘಟಕದ ಅಧ್ಯಕ್ಷ ನಾಗೇಶ ಅಮರಾಪುರ ಮಾತನಾಡಿ, ಬೀದಿ ನಾಯಿಗಳ ಹಾವಳಿಯಿಂದ ಪಟ್ಟಣದಲ್ಲಿ ಜನರಿಗೆ ಸಮಸ್ಯೆಯಾಗುತ್ತಿದ್ದು, ನಾಯಿ ಕಡಿತದಿಂದ ಅನೇಕ ಸಾವು-ನೋವುಗಳಾಗಿವೆ. ವಿಶೇಷವಾಗಿ ಲಕ್ಷ್ಮೇಶ್ವರದ ಐತಿಹಾಸಿಕ ಸೋಮೇಶ್ವರ ದೇವಸ್ಥಾನದ ಪಕ್ಕದ ಜನನಿಬಿಡ ಪ್ರದೇಶದಲ್ಲಿ ಮೀನು, ಚಿಕನ್, ಮಟನ್ ಮಾರುಕಟ್ಟೆ ಇದ್ದು ಇಲ್ಲಿ ಉಳಿದ ತ್ಯಾಜ್ಯಗಳಿಂದ ಗಬ್ಬು ವಾಸನೆ ಬರುತ್ತಿದೆ. ಅಳಿದುಳಿದ ಮಾಂಸ ತಿನ್ನುವ ಸಲುವಾಗಿ ಸಾಕಷ್ಟು ಸಂಖ್ಯೆಯ ನಾಯಿಗಳು ಇಲ್ಲಿ ಸೇರುತ್ತಿದ್ದು, ಇವು ದೇವಸ್ಥಾನಕ್ಕೆ ಬರುವ ಭಕ್ತರಿಗೆ ಅಪಾಯ ತರುವ ಸಾಧ್ಯತೆಯಿದೆ.

ಅಲ್ಲದೆ, ಲಕ್ಷ್ಮೇಶ್ವರದಲ್ಲಿ ಎಲ್ಲೆಂದರಲ್ಲಿ ಹಂದಿಗಳ ಕಾಟವೂ ಶುರುವಾಗಿದೆ. ಪಟ್ಟಣದ ಗಲ್ಲಿ ಗಲ್ಲಿಗಳಲ್ಲಿ ಹಂದಿಗಳು ಆವಾಂತರ ಸೃಷ್ಟಿಸುತ್ತಿವೆ. ಬಹಿರ್ದೆಶೆಗೆ ಕುಳಿತುಕೊಳ್ಳುವ ಮಕ್ಕಳ ಮೇಲೆ ಹಂದಿಗಳು ದಾಳಿ ಮಾಡುತ್ತಿದ್ದು, ಪುರಸಭೆ ತಕ್ಷಣ ಬೀದಿ ನಾಯಿ ಮತ್ತು ಹಂದಿಗಳ ಹಾವಳಿ ತಪ್ಪಿಸಲು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಇಸ್ಮಾಯಿಲ್ ಆಡೂರ, ಮೈನು ಮನಿಯಾರ್, ಆಸ್ಪಾಕ್ ಬಾಗೋಡಿ, ಮಹಮ್ಮದ್‌ಅಲಿ ಶಿಗ್ಗಾವಿ, ಯಲ್ಲಪ್ಪ ಹಂಜಗಿ, ಶರಣಪ್ಪ ಬಸಾಪುರ, ಪೀರ್‌ಸಾಬ್ ರಿತ್ತಿ, ಅನ್ವೀರ್ ರಿತ್ತಿ, ಬಸವರಾಜ ಅಮರಾಪುರ, ಹಜರತ್‌ಅಲಿ ಮನಿಯಾರ್ ಸೇರಿದಂತೆ ಮತ್ತಿತರರು ಇದ್ದರು.

## ನಿಧನ



### ಯಮನವ್ವ ಕಲಾಲ

ಲಕ್ಕುಂಡಿ: ಇಲ್ಲಿಯ ಮಲ್ಲಿಕಾರ್ಜುನ ಗುಡಿ ಓಣಿಯ ನಿವಾಸಿ ಯಮನವ್ವ ಕಲಾಲ(88) ಶನಿವಾರ ನಿಧನರಾದರು. ಮೃತರು ಪುತ್ರ, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

## ಕಾರ್ತಿಕ ದೀಪೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ಧಲಿಂಗ ನಗರದ ಶ್ರೀ ಮಹಾಗಣಪತಿ ಹಾಗೂ ಶ್ರೀ ಬನ್ನಿಮಹಾಂಕಾಳಿ ದೇವಸ್ಥಾನ ದಲ್ಲಿ ಕಾರ್ತಿಕೋತ್ಸವ ನಿಮಿತ್ತ ಡಿ. 3ರ ಬೆಳಿಗ್ಗೆ 6 ಗಂಟೆಗೆ ಮಹಾರುದ್ರಾಭಿಷೇಕ ಹಾಗೂ ಸಾಯಂಕಾಲ 6.30ಕ್ಕೆ ಕಾರ್ತಿಕ ದೀಪೋತ್ಸವ ಜರುಗಲಿದೆ ಎಂದು ದೇವಸ್ಥಾನ ಟ್ರಸ್ಟ್ ಕಮಿಟಿ ಪ್ರಕಟಣೆಯಲ್ಲಿ ಕೋರಿದೆ.

## ಮನೆ- ಮನದ ಅಂಧಕಾರ ಕಳೆಯಲು ಆಚರಿಸುವುದೆ ಕಾರ್ತಿಕ ದೀಪೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಮನೆ - ಮನದ ಅಂಧಕಾರವನ್ನು ಕಳೆಯಲು ಬೆಳಗುವುದೆ ಕಾರ್ತಿಕ ದೀಪೋತ್ಸವದ ಪ್ರಮುಖ ಆಚರಣೆ ಆಗಿದೆ ಎಂದು ಜಿಮ್ಸ್ ಕಣ್ಣು ವಿಭಾಗದ ಮುಖ್ಯಸ್ಥ ಕಣ್ಣು ತಪಾಸಣಾ ತಜ್ಞ ಡಾ.ಗಜಾನನ ಚನ್ನಶೆಟ್ಟಿ ಹೇಳಿದರು.

ಅವರು ನಗರದ ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಅಮವಾಸ್ಯೆಯಂದು ಏರ್ಪಡಿಸಿದ್ದ ಸಾವಿರಾರು ದೀಪಗಳ ಸಾಲಿನ ದೀಪೋತ್ಸವವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಅಹಂಕಾರದಿಂದ ಆವೃತವಾಗಿರುವ ಮನಗಳನ್ನು, ಮನೆಗಳನ್ನು ದೀಪಗಳ ಅಲಂಕಾರದೊಂದಿಗೆ ಸತ್ಯಜ್ಯೋತಿಯ ದರ್ಶನವೇ



ಕಾರ್ತಿಕ ದೀಪೋತ್ಸವವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಗರಸಭೆಯ ಪರಿಸರ ಅಭಿಯಂತರ ಆನಂದ ಬದಿ ಮಾತನಾಡಿ, ಕತ್ತಲೆ ಕವಿದ ಬದುಕಲ್ಲಿ ಬೆಳಕು ಮೂಡಿಸುವ, ಹೊಸ ಬದಲಾವಣೆ ತರುವುದೇ ಕಾರ್ತಿಕ ದೀಪೋತ್ಸವ ಆಯೋಜನೆಯ ಮಹತ್ವವಾಗಿದೆ ಎಂದರು.

ಗದಗ ತಹಸೀಲ್ದಾರ ಕಚೇರಿ ಅಧಿಕಾರಿ ರಾಜು ಮಠದ ಮಾತನಾಡಿ, ಎಲ್ಲ ಕ್ಷೇತ್ರದ ಕತ್ತಲೆಯ ಕಾರ್ಮೋಡ ದೂರವಾಗಿ ಬೆಳಕಿನ ಕಿರಣಗಳು ಪ್ರಜ್ವಲಿಸಲಿ ಎಂಬುದೆ ಕಾರ್ತಿಕ್ ಮಾಸದ ದೀಪೋತ್ಸವ ಆಚರಣೆಯ ಸಂಕೇತವಾಗಿದೆ ಎಂದರು.

ಉದ್ಘಾಟನಾ ದೀಪೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನದ ಅಧ್ಯಕ್ಷ ಬಿ.ಪ್ರಸನ್ನಕುಮಾರ ಮಾತನಾಡಿ, ಎಲ್ಲರ ಬಾಳು ಬೆಳಕಾಗಲಿ ಎಂದರಲ್ಲದೆ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ ಭಕ್ತರ ಬದುಕು ದೀಪದಂತೆ ಬೆಳಗಲಿ ಎಂದರು.

ಕಾರ್ಯಕ್ರಮಕ್ಕೆ ಆಗಮಿಸಿದ್ದ ಸರ್ವರನ್ನು ಟ್ರಸ್ಟ್ ಕಾರ್ಯದರ್ಶಿ ಯೋಗೇಶ ವೋರಾ ಸ್ವಾಗತಿಸಿದರು. ಕಾರ್ಯಕ್ರಮ ನಿರೂಪಿಸಿದ ಪತ್ರಕರ್ತ ಅನಂತ ಎಸ್.ಕಾರ್ಕಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ಪ್ರಾರಂಭದಲ್ಲಿ ಅರ್ಚಕರಾದ ಕೆ.ವ್ಹಿ.ಭಟ್ ಹಾಗೂ ಗಾಂವಕರ್ ನೇತೃತ್ವದಲ್ಲಿ ವೇದಘೋಷ ನಡೆಯಿತು. ಕೊನೆಯಲ್ಲಿ ವ್ಯವಸ್ಥಾಪಕ ರಾಮಚಂದ್ರ ಹೆಗಡೆ ವಂದಿಸಿದರು.

## ಕಾರ್ತಿಕ ಮಾಸ ಅತ್ಯಂತ ಶ್ರೇಷ್ಠ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಆರಾಧ್ಯದೈವ, ಇತಿಹಾಸ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಭಕ್ತರ ಸೇವಾ ಸಮಿತಿ ಮತ್ತು ಅರ್ಚಕರ ವತಿಯಿಂದ ಸಂಭ್ರಮ, ಶ್ರದ್ಧಾ ಭಕ್ತಿಯಿಂದ ಕಾರ್ತಿಕ ದೀಪೋತ್ಸವ ನೆರವೇರಿಸಲಾಯಿತು.

ದೀಪೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶ್ರೀ ಸೋಮೇಶ್ವರ ಭಕ್ತರ ಸೇವಾ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಮನುಷ್ಯನ ಜೀವನದಲ್ಲಿನ ಅಜ್ಞಾನವೆಂಬ ಕತ್ತಲೆಯನ್ನು ಹೊಡೆದೋಡಿಸಿ ಆಂತರಿಕ ಚೇತನಕ್ಕೆ ಶಕ್ತಿ ತುಂಬಲು ಹಾಗೂ ನಾಡಿನ ಜನರ ಶಾಂತಿ, ನೆಮ್ಮದಿ, ಸೌಹಾರ್ದತೆಯ ಪ್ರತೀಕವಾಗಿ



ಜರುಗುವ ಈ ಕಾರ್ತಿಕಮಾಸ ಅತ್ಯಂತ ಶ್ರೇಷ್ಠವಾದುದಾಗಿದೆ. ಸಂಪ್ರದಾಯಬದ್ಧ, ಅರ್ಥಪೂರ್ಣವಾದ ಇಂತಹ ಪವಿತ್ರ ಆಚರಣೆಗಳಿಗೆ ಮಹತ್ವದ ಸ್ಥಾನವಿದೆ. ಇವುಗಳನ್ನು ಪ್ರತಿಯೊಬ್ಬರೂ ಪಾಲಿಸುವ ಮೂಲಕ ನಮ್ಮ ಸಂಸ್ಕೃತಿ, ಧರ್ಮ ಉಳಿಸಲು ಬದ್ಧರಾಗಬೇಕು ಎಂದು ಹೇಳಿದರು.

ಶಿವಪಾರ್ವತಿಯರು ನಂದಿ ಮೇಲೆ ಕುಳಿತ ಸೋಮೇಶ್ವರ ದೇವರ ಮೂರ್ತಿಯನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಸೋಮೇಶ್ವರನ ಮೂರ್ತಿಯಪಲ್ಲಕ್ಕಿ ಉತ್ಸವ ಸೇವೆ ಮಂಗಲ ವಾದ್ಯಗಳೊಂದಿಗೆ ನೆರವೇರಿತು. ಈ ಸಂದರ್ಭದಲ್ಲಿ ಅರ್ಚಕರಾದ ಸೋಮನಾಥ ಪೂಜಾರ, ರಾಘವೇಂದ್ರ ಪೂಜಾರ, ಸಮೀರ ಪೂಜಾರ, ಚಂದ್ರಶೇಖರಯ್ಯ ಪುರಾಣಿಕಮಠ, ದೇವಸ್ಥಾನ ಕಮಿಟಿಯವರು, ಭಕ್ತರು ಪಾಲ್ಗೊಂಡಿದ್ದರು.

## ಬಾಲ್ಯ ವಿವಾಹ, ಭ್ರೂಣ ಹತ್ಯೆ, ಮಕ್ಕಳ ಸಾಗಾಣಿಕೆ, ಮಾರಾಟ ಕುರಿತು ತರಬೇತಿ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಹಾಗೂ ತಾಲೂಕ ಮಟ್ಟದ ಅಧಿಕಾರಿ/ಸಿಬ್ಬಂದಿಗಳಿಗೆ ಬಾಲ್ಯವಿವಾಹ, ಪೋಕ್ಸೋ, ಭ್ರೂಣ ಹತ್ಯೆ, ಮಕ್ಕಳ ಸಾಗಾಣಿಕೆ ಮತ್ತು ಮಾರಾಟ ಹಾಗೂ ವಲಸೆ ಕುಟುಂಬದ ಮಕ್ಕಳ ರಕ್ಷಣೆ ಕುರಿತು ತರಬೇತಿ ಕಾರ್ಯಕ್ರಮವನ್ನು ಡಿಸೆಂಬರ್ 3 ರಂದು ಬೆಳಿಗ್ಗೆ 10 ಘಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಗೌರವಾನ್ವಿತ ಸದಸ್ಯರಾದ ಶೇಖರಗೌಡ ರಾಮತ್ನಾಳ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ ಎಸ್ ಶಿವನಗೌಡ್ರ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಜಯಶ್ರೀ ಕವಲೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಶ್ರೀಮತಿ ಪದ್ಮಾವತಿ ಜಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಎಸ್ ಬಿ ಮಸನಾಯಕ ಆಗಮಿಸುವರು.

ವಕೀಲರಾದ ಜಿ.ಸಿ.ರೇಶ್ಮಿ ಅವರು ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲಿದ್ದಾರೆ. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀಮತಿ ರಫೀಕಾ ಎ ಹಳ್ಳೂರು ಸ್ವಾಗತ ಕೋರಿದ್ದಾರೆ.

### ಹಿರೇಹಂದಿಗೋಳ ಗ್ರಾಮದಲ್ಲಿ ಶಾಲಾ ಕೊಠಡಿ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಫಲಿತಾಂಶ ಸುಧಾರಣೆ ನಮ್ಮೆಲರ ಗುರಿಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಕ್ಷೇತ್ರದ ಎಲ್ಲ ಶಾಲೆಗಳ ಮೂಲಭೂತ ಸೌಕರ್ಯ ಒದಗಿಸಲು ನಾವು ಸಿದ್ಧ. ಶಾಲೆಗಳ ಫಲಿತಾಂಶ ಸುಧಾರಣೆ ನಮ್ಮೆಲ್ಲರ ಗುರಿಯಾಗಿರಲಿ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.



ಹಿರೇಹಂದಿಗೋಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ರವಿವಾರ ಜಿಲ್ಲಾ ಪಂಚಾಯತ, ಸಾರ್ವಜನಿಕ ಶಿಕ್ಷಣ ಇಲಾಖೆ, ಗ್ರಾ.ಪಂ ಬಿಂಕದಕಟ್ಟಿ, ಎಸ್‌ಡಿಎಂಸಿ ಹಿರೇಹಂದಿಗೊಳ ಇವರುಗಳ ಸಂಯುಕ್ತ ಆಶ್ರಯದಲ್ಲಿ ಹಿರೇಹಂದಿಗೋಳ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾದ ಪ್ರೌಢ ಹಾಗೂ ಪ್ರಾಥಮಿಕ ಶಾಲಾ ಕೊಠಡಿಗಳ ಉದ್ಘಾಟನೆ, ಅಂಗನವಾಡಿ ಕಟ್ಟಡ ಭೂಮಿ ಪೂಜೆ ಹಾಗೂ ಶ್ರೀ ಶರಣಬಸವೇಶ್ವರ ಕಲ್ಯಾಣ ಮಂಟಪ ಉದ್ಘಾಟನಾ ಸಮಾರಂಭ ನೆರವೇರಿಸಿ ಸಚಿವರು ಮಾತನಾಡಿದರು.

ದಿಲ್ಲಿಯಲ್ಲಿರುವ ಸರ್ಕಾರಿ ಶಾಲೆಗಳ ವ್ಯವಸ್ಥೆ ಹಾಗೂ ಫಲಿತಾಂಶ ಸುಧಾರಣೆ ಕುರಿತಂತೆ ಅಧ್ಯಯನಕ್ಕಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಕಳುಹಿಸಿಕೊಡಲಾಗಿತ್ತು. ಅವರು ಅಧ್ಯಯನ ನಡೆಸಿ ಬಂದು ಸದ್ಯ ಗದಗ ಜಿಲ್ಲೆಯಲ್ಲಿ ಉಪನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ದಿಲ್ಲಿಯಲ್ಲಿರುವಂತೆ ಶಾಲೆಗಳು ಸುಧಾರಣೆಯಾಗಲು ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ನಾವು ಒದಗಿಸಲು ಸಿದ್ಧವಾಗಿದ್ದೇವೆ. ಶಿಕ್ಷಕ ಸಮೂಹ ಫಲಿತಾಂಶ ಸುಧಾರಣೆಗೆ ಮುಂದಾಗಲಿ ಎಂದರು.

ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಸಮಾಜದಲ್ಲಿ ಆರ್ಥಿಕ ಸುಧಾರಣೆ ತರಲು ಸಾಧ್ಯವಾಗಿದೆ. ಪಂಚ ಗ್ಯಾರಂಟಿಗಳ ಮೂಲಕ ಆರ್ಥಿಕ ಅಭಿವೃದ್ಧಿಯೊಂದಿಗೆ ಕುಟುಂಬದ ವಾರ್ಷಿಕ ವರಮಾನವೂ ಅಧಿಕವಾಗಿದೆ. ಇದು ಸಹ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾಗಲಿ ಎಂದು ಸಚಿವ ಎಚ್.ಕೆ. ಪಾಟೀಲ ಆಶಿಸಿದರು.

ಇದೇ ಸಂದರ್ಭದಲ್ಲಿ ಸಹಕಾರ ರತ್ನ ಪುರಸ್ಕೃತರಾದ ಧಾರವಾಡ ಕೆಎಂಎಫ್ ನಿರ್ದೇಶಕ ಎಚ್.ಜಿ. ಹಿರೇಗೌಡ್ರು ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಗದಗ ತಾ.ಪಂ ಮಾಜಿ ಅಧ್ಯಕ್ಷರಾದ ರವಿ ಮೂಲಿಮನಿ ಹಾಗೂ ಎಂ.ಐ. ಪಾಟೀಲ, ಬಿಂಕದಕಟ್ಟಿ ಗ್ರಾ.ಪಂ ಅಧ್ಯಕ್ಷೆ ತುಳಸಾ ತಿಮ್ಮನಗೌಡ್ರ, ಉಪಾಧ್ಯಕ್ಷೆ ದ್ಯಾಮವ್ವ ಆರಟ್ಟಿ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ನಿಂಗಪ್ಪ ತಳವಾರ, ಬಸವರಾಜ್ ಕಡೆಮನಿ, ಎಸ್.ಎನ್. ಬಳ್ಳಾರಿ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಆರ್.ಎಸ್. ಬುರಡಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮಂಗಳ ತಾಪಸ್ಕರ, ಎಸ್.ಎನ್. ನಡುವಿನಮನಿ, ಶಾಲಾ ಮುಖ್ಯ ಶಿಕ್ಷಕ ಗಂಗಾಧರಗೌಡ ಗೌಡರ, ಜಿ.ಕೆ. ಆದಪ್ಪಗೌಡರ, ಯು.ಬಿ. ಜಕ್ಕನಗೌಡರ ಮುಂತಾದವರು ಉಪಸ್ಥಿತರಿದ್ದರು.

ಈ ಹಿಂದೆ ಶ್ರೇಣೀಕೃತ ವರ್ಗ ವ್ಯವಸ್ಥೆಯಲ್ಲಿ ಮೇಲಿದ್ದವರು ಎಲ್ಲ ರಂಗದಲ್ಲಿಯೂ ಮೇಲೆ ಇರುತ್ತಿದ್ದರು. ಅದರಂತೆ ಶೈಕ್ಷಣಿಕ ವ್ಯವಸ್ಥೆಯಲ್ಲಿಯೂ ಮೇಲ್ವರ್ಗದಲ್ಲಿಯೇ ಇರುತ್ತಿದ್ದರು. ಈಗ ಆ ವ್ಯವಸ್ಥೆ ಬದಲಾಗಿದ್ದು, ಕಟ್ಟ ಕಡೆಯ ಸಮುದಾಯದ ವ್ಯಕ್ತಿಯೂ ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆ ಅಲಂಕಾರಿಸಬಹುದಾಗಿದೆ. ಇದಲ್ಲದಕ್ಕೂ ಕಾರಣಿಭೂತವಾದದ್ದು ಶಿಕ್ಷಣ. ಅದನ್ನು ಮಕ್ಕಳಿಗೆ ಸರಿಯಾಗಿ ಒದಗಿಸೋಣ ಎಂದು ಸಚಿವ ಎಚ್.ಕೆ. ಪಾಟೀಲ ಆಶಿಸಿದರು.

# ಸಮರ್ಪಕ ಬಸ್ ಸೌಕರ್ಯಕ್ಕೆ ಆಗ್ರಹಿಸಿ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಸಮರ್ಪಕ ಬಸ್ ಸೌಕರ್ಯಕ್ಕೆ ಆಗ್ರಹಿಸಿ ಎಬಿವಿಪಿ ವತಿಯಿಂದ ನೂರಾರು ವಿದ್ಯಾರ್ಥಿಗಳು ಬಸ್‌ಗಳನ್ನು ತಡೆದು ಕೆಲಕಾಲ ಪ್ರತಿಭಟನೆ ನಡೆಸಿ, ನಂತರ ಡಿಪೋ ಮ್ಯಾನೇಜರ್ ಮುಖಾಂತರ ಗದಗ ಕೆಎಸ್‌ಆರ್‌ಟಿಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿದ್ಯಾರ್ಥಿಗಳು, ಶೈಕ್ಷಣಿಕ ವರ್ಷ ಮುಗಿಯುವ ಹಂತದಲ್ಲಿದ್ದರೂ ಶಿರಹಟ್ಟಿ ತಾಲೂಕಿನ ವಿವಿಧ ಗ್ರಾಮೀಣ ಭಾಗಗಳಲ್ಲಿಯ ವಿದ್ಯಾರ್ಥಿಗಳು ಸರಿಯಾದ ಸಮಯಕ್ಕೆ ತರಗತಿಗೆ ತೆರಳಲು ಆಗುತ್ತಿಲ್ಲ. ಇದರಿಂದ ಬಹುತೇಕರು ವಿದ್ಯಾಭ್ಯಾಸದಿಂದ ವಂಚಿತರಾಗುತ್ತಿದ್ದಾರೆ. ಕೂಡಲೇ ಶಿರಹಟ್ಟಿ–ಗದಗ ನಡುವೆ ಸಮರ್ಪಕವಾಗಿ ಬಸ್ ಬಿಡಬೇಕು. ಲಕ್ಷ್ಮೇಶ್ವರದಿಂದ ಗೊಜನೂರ, ಮಾಗಡಿ, ಹೊಳಲಾಪೂರ, ಪರಸಾಪೂರ ಮಾರ್ಗವಾಗಿ ಶಿರಹಟ್ಟಿಗೆ ಹಾಗೂ ಮುಳಗುಂದ, ಬಸಾಪೂರ, ಖಾನಾಪೂರ ಮಾರ್ಗವಾಗಿ ಶಿರಹಟ್ಟಿಗೆ ಬೆಳಿಗ್ಗೆ 6 ಗಂಟೆಗೆ ಬಸ್ ಬಿಡಬೇಕು ಎಂದು ಆಗ್ರಹಿಸಿದರು.

ಬಸ್ ಅವ್ಯವಸ್ಥೆಯಿಂದ ಆಕ್ರೋಶಗೊಂಡ ನೂರಾರು ವಿದ್ಯಾರ್ಥಿಗಳು ಬೆಳಿಗ್ಗೆ 11.30ರ ಸುಮಾರಿಗೆ ಬಸ್ ನಿಲ್ದಾಣಕ್ಕೆ ಆಗಮಿಸಿ ಬಸ್‌ಗಳನ್ನು ತಡೆದು, ಸಾರಿಗೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗುತ್ತಾ ಪ್ರತಿಭಟನೆ ನಡೆಸುತ್ತಿದ್ದರು. ನಂತರ ಘಟನಾ ಸ್ಥಳಕ್ಕೆ ಸಿಪಿಐ ನಾಗರಾಜ ಮಾಢಳ್ಳಿ ಮತ್ತು ಪಿಎಸ್‌ಐ ಚನ್ನಯ್ಯ ಬೇವೂರ ಮತ್ತು ಪೊಲೀಸ್ ಸಿಬ್ಬಂದಿಗಳೊಂದಿಗೆ ಆಗಮಿಸಿ ವಿದ್ಯಾರ್ಥಿಗಳ ಮನವೊಲಿಸಿ ಅವರ ಸಮಸ್ಯೆಗಳನ್ನು ಆಲಿಸಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಮರ್ಪಕ ಬಸ್ ಸೌಲಭ್ಯ ಕಲ್ಪಿಸುವಂತೆ ಡಿಪೋ ಮ್ಯಾನೇಜರ್‌ಗೆ ಸೂಚನೆ ನೀಡಿದರು. ನಂತರ ವಿದ್ಯಾರ್ಥಿಗಳು ಪ್ರತಿಭಟನೆ ಕೈಬಿಟ್ಟು ಮನವಿ ಸಲ್ಲಿಸಿದರು.

ಎಬಿವಿಪಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅರುಣ ಬಾರ್ಕಿ, ಪರಶುರಾಮ ಕಳ್ಳಿಮನಿ, ಅಭಿಷೇಕ ಬೋರಶೆಟ್ಟರ, ಕಿರಣ ಮಜ್ಜಿಗೌಡ, ದಾನೇಶ ನವೀನ, ರವಿ ಕಪ್ಪತ್ತನವರ ಮುಂತಾದವರು ಉಪಸ್ಥಿತರಿದ್ದರು.

# ಅನುದಾನಕ್ಕಾಗಿ ವಿಶೇಷ ಚೇತನರ ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷ ಚೇತನರ ಕಲ್ಯಾಣಕ್ಕೆ ಮೀಸಲಾಗಿದ್ದ ಅನುದಾನವನ್ನು ರಾಜ್ಯದ ಕಾಂಗ್ರೆಸ್ ಸರಕಾರ ಪಂಚ ಗ್ಯಾರಂಟಿಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಿಕೊಂಡಿದೆ ಎಂದು ಆರೋಪಿಸಿ ಕರ್ನಾಟಕ ಅಂಗವಿಕಲರ ರಾಜ್ಯ ಒಕ್ಕೂಟದ ಅಧ್ಯಕ್ಷ ಶಶಿಧರ ಶಿರಸಂಗಿ ನೇತೃತ್ವದಲ್ಲಿ ವಿಶೇಷ ಚೇತನರು ಪ್ರತಿಭಟನೆ ನಡೆಸಿದರು.

ಜಿಲ್ಲಾಧಿಕಾರಿ ಕಚೇರಿ ಎದುರು ಸೇರಿದ್ದ ವಿಶೇಷ ಚೇತನರು, ಶ್ರವಣ ಸಾಧನ, ಬ್ರೈಲ್ ಕಿಟ್, ತ್ರಿಚಕ್ರ ವಾಹನ ಸೇರಿದಂತೆ ಇನ್ನು ಹತ್ತು ಹಲವಾರು ಸೌಲಭ್ಯಗಳಿಗೆ ಸರಕಾರ ಅನುದಾನ ಕಡಿತ ಮಾಡಿ, ಸಮಾಜದ ದುರ್ಬಲ ವರ್ಗದ ಜನರಿಗೆ ಅನ್ಯಾಯ ಮಾಡಿದೆ ಎಂದು ನಿರತರು ಆರೋಪಿಸಿದರು.

ಕಳೆದ ವರ್ಷ ವಿಕಲಚೇತನರ ಅಗತ್ಯಗಳಿಗೆ ಸರ್ಕಾರ 53 ಕೋಟಿ ರೂ. ನೀಡಿತ್ತು. ಆದರೆ ಈ ಮೊತ್ತದ ಹಣ ಅತ್ಯಲ್ಪವಾಗಿದ್ದರೂ 2024–25ನೇ ಸಾಲಿನಲ್ಲಿ ಈ ಹಣವನ್ನು 10 ಕೋಟಿ ರೂ.ಗೆ ಇಳಿಕೆ ಮಾಡಿದೆ. ದೈಹಿಕ ವಿಕಲಚೇತನರಿಗೆ ಬ್ಯಾಟರಿ ಚಾಲಿತ ಗಾಲಿಕುರ್ಚಿಗಳನ್ನು ನೀಡುವ ಮತ್ತೊಂದು ಯೋಜನೆಯಲ್ಲಿಯೂ ವಿಳಂಬವಾಗಿದ್ದು, ಕರ್ನಾಟಕ ಅಂಗವಿಕಲರ ರಾಜ್ಯ ಒಕ್ಕೂಟ ಇದನ್ನು ಖಂಡಿಸುತ್ತದೆ ಎಂದರು.

ಈ ಸಂದರ್ಭದಲ್ಲಿ ಭಾರತಿ ಮೂರಸಿಳ್ಳಿ, ಖಾಜಾ ಹುಸೇನ, ಬಸವರಾಜ ಓಲಿ, ಬಸವರಾಜ ನಾಯ್ಕರ, ಶಿವಾನಂದ ಹಾದಿಮನಿ, ಫಕೀರೇಶ ಹಡಪದ, ಮೌನೇಶ ಬಡಿಗೇರ, ಜ್ಯೋತಿ ಗೌಳಿ, ಜ್ವಾಲಮ್ಮ ಮಂಟಗಣಿ, ವನಜಾಕ್ಷಿ ಹಾಲಗಿಮಠ, ಹಾಲೇಶ ಜಗದರ, ಪ್ರಕಾಶ ಕಾಟನಳ್ಳಿ, ಶಿವಾನಂದ ಕುದುರಿ, ಫಕೀರೇಶ ಚಿಗಹಳ್ಳಿ, ನಾಗರಾಜ ಪೂಜಾರ, ನಿಂಗಪ್ಪ ಹುಳ್ಳಿ, ರಾಜಶೇಖರ ಕಣಕೇರಿ, ಮಂಜುನಾಥ ರಾಮಗಿರಿ, ಪ್ರೇಮವ್ವ ಬಡಪ್ಪನವರ ಮುಂತಾದವರಿದ್ದರು.

# ಐದರ ಪೋರಿಗೆ 'ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್' ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ




ತಾಲೂಕಿನ ನರಸಾಪೂರ ಗ್ರಾಮದ ಖಾದಿ ನಗರದ ಐದು ವರ್ಷದ ಬಾಲಪ್ರತಿಭೆ ಋತ್ವಿಕಾ ಸೋಮೇಶ್ವರ ಬಿದರೂರ 2024ನೇ ಸಾಲಿನ ಬುಕ್ ಆಫ್ ರೆಕಾರ್ಡ್ಸ್‌ಗೆ ಸೇರ್ಪಡೆಯಾಗಿದ್ದಾಳೆ.

ಅತೀ ಚಿಕ್ಕ ವಯಸ್ಸಿನಲ್ಲಿ ನೆಲದ ಮೇಲೆ ಚಿತ್ತಾರದ ರಂಗೋಲಿ ಬಿಡಿಸುವ ಕಲೆ ಹೊಂದಿರುವ ಋತ್ವಿಕಾಗೆ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಪ್ರಶಸ್ತಿ ಒಲಿದು ಬಂದಿದೆ. ಚುಕ್ಕಿ ರಂಗೋಲಿಯಲ್ಲಿ ದೀಪ, ಗಣೇಶ, ವಿವಿಧ ಹೂಗಳು ಸೇರಿ 15–20 ವಿವಿಧ ರಂಗೋಲಿಯನ್ನು ಬಿಡಿಸುವ ಈಕೆ ತನ್ನ ತಾಯಿ ಪ್ರಿಯಾ ಅವರಿಂದ ಪ್ರೇರಣೆ ಪಡೆದು ಅತೀ ಚಿಕ್ಕ ವಯಸ್ಸಿನಿಂದಲೇ ರಂಗೋಲಿ ಬಿಡಿಸುವ ಆಸಕ್ತಿ ಹೊಂದಿದ್ದಳು.

ಈ ಹಿನ್ನೆಲೆಯಲ್ಲಿ ಋತ್ವಿಕಾ ತಂದೆ–ತಾಯಿ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್‌ಗೆ ರಂಗೋಲಿ ಚಿತ್ರ ಬಿಡಿಸುತ್ತಿರುವ ದೃಶ್ಯಾವಳಿಗಳನ್ನು ಕಳುಹಿಸಿದ್ದರು. ದೃಶ್ಯಾವಳಿಗಳನ್ನು ಪರಿಗಣಿಸಿ ಋತ್ವಿಕಾ ಬಿದರೂರಗೆ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಪ್ರಶಸ್ತಿ ನೀಡಿ ಗೌರವಿಸಿದೆ.

### ಕೆಇಎ ಸೀಟು ಬ್ಲಾಕ್ ಹಗರಣ: 8 ಮಂದಿ ಬಂಧನ

ಬೆಂಗಳೂರು: ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ)ದ ವತಿಯಿಂದ ಸರ್ಕಾರಿ ಕೋಟಾದಡಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ನಡೆಸುವ ಸೀಟು ಹಂಚಿಕೆ ಹಗರಣದಲ್ಲಿ ಶಾಮೀಲಾದ ಆರೋಪದಡಿ, ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು 8 ಆರೋಪಿಗಳನ್ನು ಬಂಧಿಸಿದ್ದಾರೆ.

### ಗೋಲಿಬಾರ್ ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಒದಗಿಸಲು ಆಗ್ರಹ

# ಎಸ್‌ಡಿಪಿಐ ಜಿಲ್ಲಾ ಘಟಕದಿಂದ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಗದಗ




ಉತ್ತರ ಪ್ರದೇಶದ ಸಂಬಲ್‌ನಲ್ಲಿ ನಡೆದ ಗೋಲಿಬಾರ್‌ನಲ್ಲಿ ಐವರ ಹತ್ಯೆ ನಡೆಸಿದ ಘಟನೆಯನ್ನು ವಿರೋಧಿಸಿ ಹಾಗೂ ರಾಷ್ಟ್ರಪತಿಗಳು ಮಧ್ಯೆ ಪ್ರವೇಶಿಸಿ ಉತ್ತರ ಪ್ರದೇಶ ಸರ್ಕಾರವನ್ನು ವಜಾಗೊಳಿಸಬೇಕು ಎಂದು ಆಗ್ರಹಿಸಿ ಸೋಮವಾರದಂದು ನಗರದ ಟಿಪ್ಪು ಸುಲ್ತಾನ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಎಸ್‌ಡಿಪಿಐನಿಂದ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಎಸ್‌ಡಿಪಿಐ ಗದಗ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ ಮಾತನಾಡಿ, ದೇಶದಲ್ಲಿ ಅಲ್ಪಸಂಖ್ಯಾತರ ಧಾರ್ಮಿಕ ಕೇಂದ್ರಗಳು ಇರಬಾರದು ಎಂಬ ವ್ಯವಸ್ಥಿತ ಪಿತೂರಿ ನಡೆಯುತ್ತಿದೆ. ಸಂಘ ಪರಿವಾರದ ಈ ಆಡಳಿತ ವ್ಯವಸ್ಥೆಗೆ ಪೊಲೀಸ್ ವ್ಯವಸ್ಥೆ ಕೂಡ ಪೂರಕವಾಗಿ ಕೆಲಸ ಮಾಡುತ್ತಿದೆ. ಈ ಅನ್ಯಾಯದ ವಿರುದ್ಧ ರಾಷ್ಟ್ರಾದ್ಯಂತ ಎಸ್‌ಡಿಪಿಐ ವತಿಯಿಂದ ಹೋರಾಟ ಮಾಡಲಾಗುತ್ತಿದೆ ಎಂದರು.

ಮುಖಂಡರಾದ ಎಂ. ಇಸ್ಮಾಯಿಲ್‌ಸಾಬ್ ಮಾತನಾಡುತ್ತ, ದೇಶದಲ್ಲಿ ಮುಸ್ಲಿಮರ ಧಾರ್ಮಿಕ ಭಾವನೆಗಳಿಗೆ ಪದೆ ಪದೇ ಧಕ್ಕೆ ಉಂಟಾಗುತ್ತಿದ್ದು, ಆಡಳಿತಾರೂಢ ಪಕ್ಷಗಳು ಅಲ್ಪಸಂಖ್ಯಾತರ ಹಿತ ಕಾಪಾಡುವಲ್ಲಿ ಸಂಪೂರ್ಣ ವಿಫಲವಾಗಿವೆ ಎಂದು ಆರೋಪಿಸಿದರು. ಪ್ರತಿಭಟನೆಯಲ್ಲಿ ಎಸ್‌ಡಿಪಿಐ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ, ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಕಾರ್ಯದರ್ಶಿ ಇರ್ಫಾನ್ ಗುಳಗುಂದಿ, ಗದಗ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರಾದ ಅಫ್ಘಾನ್ ತರಫ್ದಾರ್, ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಪ್ರದಾನ ಕಾರ್ಯದರ್ಶಿ ಅಬ್ದುಲ್ ಕಾಗದಗಾರ, ಸಯ್ಯದ್ ಮದಾರ, ಅಬ್ದುಲ್ಲಾ ಕೊಟ್ಟೂರ್, ಸಲೀಂ ಅಹ್ಮದ್ ಮಾಳೆಕೊಪ್ಪ, ಸಾದಿಕ್ ದೊಡ್ಡಮನಿ, ಸಾದಿಕ್ ಶಿರಹಟ್ಟಿ, ಮುಸ್ತಾಕ್ ಕಟ್ಟಿಮನಿ, ಹಸ್ಸನ್ ನಾಗನೂರ್, ಸಮೀರ್ ಕೊಟ್ಟೂರು, ಮುಸ್ತಾಕ್ ಹೊಸಮನಿ, ಅನ್ವರ್ ಮುಲ್ಲಾ, ಸಮೀರ್ ಕೊಲ್ಕರ್, ಪಕ್ಷದ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಶಾಂತಗೇರಿ ತಾಲೂಕ ॥ ಗಜೇಂದ್ರಗಡ, ಜಿಲ್ಲಾ ॥ ಗದಗ**

ಸಂ.ಗ್ರಾ.ಪಂಶಾಂ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ : 02–12–2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಶಾಂತಗೇರಿ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ. ಗಳಲ್ಲಿ) | ಷರಾ |
|---|---|---|---|---|
| 01 | ಶಾಂತಗಿರಿ ಗ್ರಾಮದ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಕಬಡ್ಡಿ ಗ್ರೌಂಡ್ ನಿರ್ಮಾಣ | 133250.75 | 1000.00 | ಖಾಲಿ ಟೆಂಡರ್ ಫಾರ್ಮ ಗ್ರಾಮ ಪಂಚಾಯತಿ–ಯಿಂದ ಪಡೆದು ಸಲ್ಲಿಸುವುದು |
| 02 | ಶಾಂತಗೇರಿ ಗ್ರಾಮದ 2 ward in ನೀಲಪ್ಪ ಧ ಮುದೇನಗುಡಿ ಇವರ ಮನೆಯಿದ ಬಸನಗೌಡ್ರ ಇವರ ಮನೆಯ ವರೆಗೆ ಸಿಸಿ ರಸ್ತೆ ನಿರ್ಮಾಣ | 307892.37 | 1000.00 | |
| 03 | ಬೊಮ್ಮಸಾಗರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶೌಚಾಲಯ ನಿರ್ಮಾಣ | 348887.6 | 1000.00 | |
| 04 | ಶಾಂತಗೇರಿ ಗ್ರಾಮದ ಸರಕಾರಿ ಪ್ರೌಢ ಶಾಲೆಯಲ್ಲಿ ಶೌಚಾಲಯ ನಿರ್ಮಾಣ | 82321.37 | 1000.00 | |
| 05 | ಸರ್ಜಾಪೂರ ಗ್ರಾಮದ ನೀಲಪ್ಪ ಕೊಟೆಕಲ್ ಇವರ ಮನೆಯಿಂದ ತುಳಸವ್ವ ಲಮಾಣಿ ಇವರ ಮನೆಯ ವರೆಗೆ ಸಿಸಿ ಗಟಾರ ನಿರ್ಮಾಣ | 152995.06 | 1000.00 | |
| 06 | ಶಾಂತಗೇರಿ ಗ್ರಾಮದ ಹನಮಂತ ದೇವರಮನಿ ಇವರ ಮನೆಯಿಂದ ಸಾಂತಪ್ಪ ಕಟ್ಟಿಮನಿ ಇವರ ಮನೆಯ ವರೆಗೆ ಸಿಸಿ ರಸ್ತೆ ನಿರ್ಮಾಣ | 120772.14 | 1000.00 | |
| 07 | ಶಾಂತಗೇರಿ ಗ್ರಾಮದ ಅಶೋಕ ಕೊಡತಗೇರಿ ಇವರ ಮನೆಯಿಂದ ಉಮೇಶ ಹಳಗೇರಿ ಇವರ ಮನೆಯ ವರೆಗೆ ಸಿಸಿ ರಸ್ತೆ ನಿರ್ಮಾಣ | 117871.32 | 1000.00 | |
| 08 | ಸರ್ಜಾಪೂರ ಗ್ರಾಮದ ಈರಬಸಪ್ಪ ಪಲ್ಲೇದ ಇವರ ಮನೆಯಿಂದ ದುರ್ಗಾದೇವಿ ಗುಡಿಯ ವರೆಗೆ ಸಿಸಿ ರಸ್ತೆ ನಿರ್ಮಾಣ | 103892.36 | 1000.00 | |
| 09 | ಬೊಮ್ಮಸಾಗರ ಗ್ರಾಮದ ಶಂಕ್ರಪ್ಪ ಸಾಂ ಕುಂಕದ ಇವರ ಮನೆಯಿಂದ ಪಡಿಯಪ್ಪ ಕುಂಕದ ಮನೆಯ ವರೆಗೆ ಸಿಸಿ ರಸ್ತೆ ನಿರ್ಮಾಣ | 158491.06 | 1000.00 | |
| 10 | ಸರ್ಜಾಪೂರ ಗ್ರಾಮದ ದುರ್ಗಾದೇವಿ ಕಟ್ಟಿಯಿಂದ ನಾಗದೇವತೆ ಕಟ್ಟೆಯ ವರೆಗೆ ಗಟಾರ ನಿರ್ಮಾಣ | 119451.96 | 1000.00 | |
| 11 | ಬೊಮ್ಮಸಾಗರ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯಿಂದ ಮೇನ್ ರಸ್ತೆ ವರೆಗೆ ಗಟಾರ ನಿರ್ಮಾಣ | 297909.42 | 1000.00 | |
| 12 | ಬೊಮ್ಮಸಾಗರ ಗ್ರಾಮದ ಬಸನಗೌಡ ಅಂಟರದಾನಿ ಇವರ ಮನೆಯಿಂದ ಮುತ್ತಪ್ಪ ಶೇತಸನದಿ ಇವರ ಮನೆವರೆಗೆ ಸಿಸಿ ಗಟಾರ ನಿರ್ಮಾಣ | 239845.38 | 1000.00 | |
| 13 | ಶಾಂತಗೇರಿ ಗ್ರಾಮದ ಚಂದ್ರಪ್ಪ ಬಸಪ್ಪ ತುಗ್ಗಣಿ ಇವರ ಹೊಲದಿಂದ ರೈತರ ಜಮಿನಿಗೆ ಹೋಗಲುರಸ್ತೆಗೆ ಮೊರಂ ಮತ್ತು ಮೆಟಲಿಂಗ ರಸ್ತೆ | 115510.87 | 1000.00 | |
| 14 | ಬೊಮ್ಮಸಾಗರ ಗ್ರಾಮದ ಮಲ್ಲಪ್ಪ ಸಾಂ ಲಗಳಿ ಇವರ ಮನೆಯಿಂದ ಪ್ರಕಾಶ ಮಾವಿನಗಿಡದ ಮನೆ ವರೆಗೆ ಸಿಸಿ ರಸ್ತೆ | 150676.74 | 1000.00 | |
| 15 | ಶಾಂತಗೇರಿ ಗ್ರಾಮದ ವ್ಯಾಪಾರಿ ಇವರ ಹೊಲದಿಂದ ಕಸವಿಲೇವಾರಿ ವರೆಗೆ ಮೊರಂ ಮತ್ತು ಮೆಟಲಿಂಗ ರಸ್ತೆ | 160053.48 | 1000.00 | |
| 16 | ಶಾಂತಗೇರಿ ಗ್ರಾಮದ ಸಾಂತಪ್ಪ ಜಾಲಿಹಾಳ ಇವರ ಜಮಿನಿನ ರೈತರ ಜಮಿನುಗಳಿಗೆ ಹೋಗುವ ಸರಕಾರಿ ಹಳ್ಳಕ್ಕೆ ಗಟಾರ ಮತ್ತು ಸ್ಲ್ಯಾಬ | 116628.13 | 1000.00 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : **03–12–2024** ರಿಂದ **10–12–2024** ರವರೆಗೆ ರಿಂದ ರವರೆಗೆ, ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ : **13–12–2024,** ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : **16–12–2024** ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ಸಮಯ : 4.00 ಘಂಟೆಯವರೆಗೆ.

**ನಿಬಂಧನೆಗಳು** (1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಶಾಂತಗೇರಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/– ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಶಾಂತಗೇರಿ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/429/2024–25

**ಸಹಿ/– ಅಧ್ಯಕ್ಷರು, ಗ್ರಾಮ ಪಂಚಾಯತಿ ಶಾಂತಗೇರಿ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka